31

ಶಿವಾನುಭವ ಗ್ರಂಥಮಾಲಾ ನಂ|| ೧೭

DLP

# ಲಿಂಗಮ್ಮನ ವಚನಗಳು

ಸಂಪಾದಕರು

ರಾ|| ಸಾ|| ಫ.ಗು.ಹಳಕಟ್ಟಿ

ಬಿ.ಎ.ಎಲ್.ಎಲ್.ಬಿ.

ವಿಜಾಪುರ

820
570

೧೯೨೯

ಶಿವಾನುಭವ ಗ್ರಂಥಮಾಲಾ ನಂ॥ ೧೭

# ಲಿಂಗಮ್ಮನ ವಚನಗಳು.

ಸಂಪಾದಕರು

ರಾ॥ ಸಾ॥ ಫ. ಗು. ಹಳಕಟ್ಟಿ
ಬಿ. ಎ. ಎಲ್. ಎಲ್. ಬಿ. ವಕೀಲ

ವಿಜಾಪುರ.

ಲಿಂಗಾಯತ ಸಂಶೋಧನ ಕೇಂದ್ರ ಗ್ರಂಥಾಲಯ
ಅರಿವೇ ಗುರು
ಕ್ರಮಾಂಕ
ಶಿವಬಸವನಗರ
ನಾಗನೂರ ಶ್ರೀ ರುದ್ರಾಕ್ಷಿಮಠ

# ಪ್ರಸ್ತಾವನೆ.

ಈಗ ನಾವು ಲಿಂಗಮ್ಮನ ವಚನಗಳನ್ನು ಪ್ರಸಿದ್ಧಿಸಿದ್ದು ವಚನಕಾರಳು ಹಡಪದಪ್ಪಣ್ಣನ ಭಾರ್ಯೆಯಾಗಿದ್ದಾಳೆ. ಹಡಪದಪ್ಪಣ್ಣನು ಬಸವೇಶ್ವರನ ಕಾಲಕ್ಕೆ ಬಹಳ ಮನ್ನಣೆಯನ್ನು ಹೊಂದಿದವನಾಗಿದ್ದನು. ಅವನ ಹೆಂಡತಿಯಾದರೂ ಅವನಂತೆಯೇ ಬಹಳ ವಿದ್ವಾಂಸಳಾಗಿದ್ದಳು. ಇದು ಆಕೆಯ ವಚನಗಳಿಂದ ಸ್ಪಷ್ಟವಾಗಿ ತಿಳಿದುಬರುತ್ತದೆ. ಈ ವಚನಗಳ ಎರಡು ಪ್ರತಿಗಳು ನಮಗೆ ದೊರೆದಿದ್ದು ಅವುಗಳ ಸಹಾಯದಿಂದ ಈ ಗ್ರಂಥವು ಅಚ್ಚುಹಾಕಲ್ಪಟ್ಟಿದೆ. ಒಂದು ಪ್ರತಿಯು ವಿಜಾಪುರದಲ್ಲಿಯ ಪೆನಶನ್ನ ಮಾಸ್ತರರಾದ ರಾ॥ ರಾ॥ ಶಿವಲಿಂಗಪ್ಪ ಮುದ್ದೇಬಿಹಾಳ ಇವರಿಂದ ಕಳಿಸಿಕೊಡಲ್ಪಟ್ಟಿದ್ದು; ಮತ್ತೊಂದು ಪ್ರತಿಯು ರಾ॥ ರಾ॥ ಪಂಚಪ್ಪ ಹರ್ಡೇಕರ ಇವರಿಂದ ಕಳಿಸಿ ಕೊಡಲ್ಪಟ್ಟಿತು. ಈ ಪ್ರಕಾರ ಈ ಪ್ರತಿಗಳನ್ನು ನಮಗೆ ಕಳಿಸಿಕೊಟ್ಟದ್ದಕ್ಕೆ ನಾವು ಈ ಉಭಯ ಮಹನೀಯರಿಗೆ ಬಹಳ ಆಭಾರಿಯಾಗಿದ್ದೇವೆ.

ಲಿಂಗಮ್ಮನ ವಚನಗಳಾದರೂ ಅನೇಕ ವಿಷಯುಗಳನ್ನೊಳಕೊಂಡು ಭಾವಭರಿತವಾಗಿವೆ. ಆಕೆಯು ಬಸವೇಶ್ವರ, ಚನ್ನಬಸವೇಶ್ವರ, ಅಲ್ಲಮಪ್ರಭು ಮೊದಲಾದವರ ಬಗ್ಗೆ ಅತ್ಯಂತ ಭಕ್ತಿಭಾವವುಳ್ಳವಳಾಗಿದ್ದಾಳೆ. ಈ ಗ್ರಂಥದಲ್ಲಿ ವೀರಶೈವ ಮತದ ಸಾಮಾನ್ಯ ತತ್ವಗಳು ಸಂಕ್ಷೇಪವಾಗಿದ್ದರೂ ಬಹು ವಿಶದವಾಗಿ ವಿವರಿಸಲ್ಪಟ್ಟಿವೆ.

ವಿಜಾಪುರ.
೩೦-೭-೨೯

ಫ. ಗು. ಹಳಕಟ್ಟಿ
ಸಂಪಾದಕ.

# ಲಿಂಗಮ್ಮನ ವಚನಗಳು.

೧. ಮಚ್ಚಬೇಡ. ಮರಳಿ ನರಕಕ್ಕೆರಗಿ, ಕರ್ಮಕ್ಕೆ ಗುರಿಯಾಗಬೇಡ. ನಿಶ್ಚಿಂತನಾಗಿ ನಿಜದಲ್ಲಿ ಚಿತ್ತವ ಸುಯಿಧಾನವ ಮಾಡಿ, ಲಿಂಗದಲ್ಲಿ ಮನ ಅಚ್ಚೊತ್ತಿದಂತಿರಿಸಿ, ಕತ್ತಲೆಯನೆಕಳೆದು, ಬಚ್ಚಬರಿಯ ಬೆಳಗಿನೊಳಗೆ ಓಲಾಡಿ ಸುಖಿಯಾಗೆಂದರು ನಮ್ಮ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೨. ಮದ ಮತ್ಸರ ಬಿಡದು. ಮನದ ಕನಲು ನಿಲ್ಲದು. ಒಡಲ ಗುಣ ಹಿಂಗದು. ಇವ ಮೂರನು ಬಿಡದೆ ನಡಿಸುವನ್ನಕ್ಕ, ಘನವ ಕಾಣಬಾರದು. ಘನವ ಕಾಂಬುದಕ್ಕೆ, ಮದಮತ್ಸರವನೆ ಬಿಟ್ಟು, ಮನದ ಕನಲ ನಿಲಿಸಿ, ಒಡಲ ಗುಣವನೆ ಹಿಂಗಿಸಿ, ತಾ ದೃಢರೂಪಾದಲ್ಲದೆ, ಘನವ ಕಾಣಬಾರದೆಂದರು ನಮ್ಮ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೩. ಮನ ಮರವೆಗೆ ಮುಂದುಮಾಡಿತ್ತು. ತನು ಕಳವಳಕ್ಕೆ ಮುಂದುಮಾಡಿತ್ತು. ಆಸೆರೋಷವೆಂಬವು ಅಡ್ಡಗಟ್ಟಿದವು. ಕೋಪ ಕ್ರೋಧವೆಂಬವು ಮುಂದುವರಿದವು. ಇದರೊಳಗೆ ಜಗದೀಶ್ವರನೆನಿಸಿಕೊಂಬವರ ನುಡಿಯು ಓಸರಿಸುವದು ನಮ್ಮ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೪. ಆಸೆಯನಳಿದು, ರೋಷವ ನಿಲಿಸಿ, ಜಗದ ಪಾಶವನರಿದು, ಈಶ್ವರನೆನಿಸಿಕೊಂಬ ಶರಣರ ಜಗದ ಹೇಸಿಗಳೆತ್ತ ಬಲ್ಲರೊ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ?

೫. ನೆನೆವುತ್ತಿದೆ ಮನ. ದುರ್ವಾಸನೆಗೆ ಹರಿವುತ್ತಿದೆ. ಕೊನೆಕೊಂಬೆಗೆ ಎಳೆವುತ್ತಿದೆ. ಕಟ್ಟಿಗೆ ನಿಲ್ಲದು. ಬಿಟ್ಟರೆ ಹೋಗದು. ತನ್ನ ಇಚ್ಛೆಯಲಾಡುವ ಮನವ ಕಟ್ಟಿಗೆ ತಂದು, ಗೊತ್ತಿಗೆ ನಿಲಿಸಿ, ಬಚ್ಚಬರಿಯ ಬೆಳಗಿನೊಳಗೆ ಓಲಾಡುವ ಶರಣರ ಪಾದದಲ್ಲಿ ನಾ ಬೆಚ್ಚಂತಿದ್ದೆನಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೬. ನಿಮ್ಮ ಪಾದವಿಡಿದು, ಮನ ನಿರ್ಮಳವಾಯಿತ್ತು. ನನ್ನ ತನು ಶುದ್ಧವಾಯಿತ್ತು. ಕಾಯ ಗುಣವಳಿಯಿತ್ತು. ಕರಣಗುಣ ಸುಟ್ಟು ಭಾವ ವಳಿದು ಬಯಕೆ ಸವೆದು, ಮಹಾದೇವನಾದ ಶರಣರ ಪಾದವಿಡಿದು, ನಿಜಮುಕ್ತಳಾದೆನಯ್ಯಾ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೭. ವ್ಯಾಪಾರವ ಬಿಟ್ಟು, ತಾಪತ್ರಯವನೆ ಹಿಂಗಿ. ಲೋಕದ ಹಂಗನೆ ಹರಿದು, ಬೇಕು ಬೇಡೆಂಬುದನೆ ನೂಕಿ, ತಾ ಸುವಿವೇಕಿಯಾ ದಲ್ಲದೆ, ಜ್ಯೋತಿಯ ಬೆಳಗ ಕಾಣಬಾರದೆಂದರು ನಮ್ಮ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೮. ಅಯ್ಯಾ, ಈ ಮಹಾಘನವ ಕಾಂಬುದಕ್ಕೆ, ಹಸಿವು ಕೆಡಬೇಕು. ತೃಷೆಯಡಗಬೇಕು. ವ್ಯಸನ ನಿಲ್ಲಬೇಕು. ನಿದ್ರೆ ಹರಿಯಬೇಕು. ಜೀವ ಬುದ್ಧಿ ಹಿಂಗಬೇಕು. ಮನ ಪವನ ಬಿಂದು ಒಡಗೂಡಬೇಕು. ಚಿತ್ತ ಒತ್ತಟ್ಟಗೆ ಹೋಗದಿರಬೇಕು. ಹೊತ್ತುಹೊತ್ತಿಗೆ ಎತ್ತರವನೇರಿ, ಬೆಚ್ಚು ಬೇರಿಲ್ಲದೆ ಲಿಂಗದೊಳಗೆ ಅಚ್ಚೊತ್ತಿದಂತೆ ಬೆರೆದರೆ, ಕತ್ತಲೆ ಹರಿಯು ವದು. ಮರವೆ ಹಿಂಗುವದು, ನಿದ್ರೆ ಹರಿಯುವದು, ಹಸಿವು ಕೆಡುವುದು, ತೃಷೆಯಡಗುವದು, ವ್ಯಸನ ನಿಲ್ಲುವುದು. ಇವೆಲ್ಲವನು ಹಿಂಗಿಸಿ ತಾ ಲಿಂಗ ವ್ಯಸನಿಯಾಗಬಲ್ಲರೆ ಮುಂದೆ ಮಹಾ ಮಂಗಳದ ಬೆಳಗು ಕಾಣಿಪು ದೆಂದರು ನಮ್ಮ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೯. ಆಸೆಯುಳ್ಳನ್ನಕ್ಕ ರೋಷ ಬಿಡದು. ಕಾಮವುಳ್ಳನ್ನಕ್ಕ ಕಳವಳ ಬಿಡದು. ಕಾಯುಗುಣವುಳ್ಳನ್ನಕ್ಕ ಜೀವನ ಬುದ್ಧಿ ಬಿಡದು. ಭಾವವುಳ್ಳನ್ನಕ್ಕ ಬಯಕೆ ಸವೆಯದು. ನಡೆಯುಳ್ಳನ್ನಕ್ಕ ನುಡಿಗೆಡದು. ಇವೆಲ್ಲವು ಮುಂದಾ ಗಿದ್ದು ಹಿಂದನರಿದೆನೆಂಬ ಸಂದೇಹಿಗಳಿರಾ ನೀವು ಕೇಳಿರೋ. ನಮ್ಮ ಶರಣರು ಹಿಂದೆ ಹೀಗೆ ಅರಿದರೆಂದರೆ, ಆಸೆಯನಳಿದರು. ರೋಷವ ಹಿಂಗಿ ದರು. ಕಾಮನ ಸುಟ್ಟು ಕಳವಳ ಹಿಂಗಿದರು. ಕಾಯ ಗುಣವಳಿದು ಜೀವನ ಬುದ್ಧಿಯ ಹಿಂಗಿದರು. ಭಾವವ ಬಯಲು ಮಾಡಿ ಬಯಕೆ ಸವೆದರು. ಹಿಂದನರಿದು ಮುಂದೆ ಲಿಂಗವೆ ಗೂಡಾದ ಶರಣರ ಈ ಸಂದೇಹಿಗ ಳೆತ್ತ ಬಲ್ಲರೊ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ?

೧೦. ಕಾಮವಿಲ್ಲ, ಕ್ರೋಧವಿಲ್ಲ, ಲೋಭವಿಲ್ಲ, ಮೋಹವಿಲ್ಲ, ಮದವಿಲ್ಲ, ಮತ್ಸರವಿಲ್ಲ ಎಂಬ ಅಣ್ಣಗಳಿರಾ ನೀವು ಕೇಳಿರೊ, ಹೇಳಿ



ಹೆನು. ಕಾಮವಿಲ್ಲದವಂಗೆ ಕಳವಳ ಉಂಟೆ? ಕ್ರೋಧವಿಲ್ಲದವಂಗೆ ರೋಷ ಉಂಟೆ? ಲೋಭವಿಲ್ಲದವಂಗೆ ಆಸೆಯುಂಟೆ? ಮೋಹವಿಲ್ಲದವಂಗೆ ಪಾಶ ಉಂಟೆ? ಮದವಿಲ್ಲದವಂಗೆ ತಾಮಸ ಉಂಟೆ? ಮತ್ಸರವಿಲ್ಲದವಂಗೆ ಮನ ಸಿನಲ್ಲಿ ಮತ್ತೊಂದು ನೆನೆವನೆ? ಇವು ಇಲ್ಲವೆಂದು ಮನವ ಕದ್ದು ನುಡಿವ ಅಪಶಬ್ದವರ ಮಾತ ಮೆಚ್ಚುವನೆ ನಮ್ಮ ಅಪ್ಪಣ್ಣಪ್ರಿಯ ಚನ್ನ ಬಸವಣ್ಣಾ?

೧೧. ನಿಶ್ಚಿಂತನಿರಾಳದಲ್ಲಿ ಆಡುವ ಮಹಾದೇವನ ಕರ್ತೃವೆಂದ ರಿದ ಕಾರಣದಿಂದ, ತತ್ವವೆಂಬುದನರಿದು ಮನವ ನಿಶ್ಚಿಂತವ ಮಾಡಿ, ನಿಜಸುಖದಲ್ಲಿ ನಿಂದು, ಕತ್ತಲೆಯ ಹರಿಯಿಸಿ, ತಮವ ಹಿಂಗಿಸಿ, ವ್ಯಾಕುಲವನಳಿದು, ನಿರಾಕುಳದಲ್ಲಿ ನಿಂದು, ಬೇಕುಬೇಡೆಂಬುಭಯವ ಳಿದು, ಲೋಕದ ಹಂಗ ಹರಿದು, ತಾನು ವಿವೇಕಿಯಾಗಿ ನಿಂದು, ಮುಂದೆ ನೋಡಿದರೆ, ಜ್ಯೋತಿಯ ಬೆಳಗ ಕಾಣಬಹುದೆಂದರು. ನಮ್ಮ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೧೨. ಬ್ರಹ್ಮಾಂಡದಲ್ಲಿ ಹುಟ್ಟಿದವರೆಲ್ಲ ಭವಬಂಧನಕ್ಕೊಳಗಾದ ರಯ್ಯಾ. ನಿಮ್ಮ ನಂಬಿದ ಸದ್ಭಕ್ತಮಹೇಶ್ವರರು ಭವಬಂಧನವನೆ ಹಿಂಗಿ ಮರಣ ಬಾಧೆಯನೆ ಗೆದ್ದು, ಕರಣಂಗಳ ಸುಟ್ಟು, ಅರಿವ ಮನವ ನಿಲಿಸಿ, ಅನಲ ಪವನ ಗುಣವರತು, ಜನನಮರಣ ವಿರಹಿತವಾದ ಶರಣರ ಭವಭಾರಿಗಳೆತ್ತ ಬಲ್ಲರು ನಿಮ್ಮ ನೆಲೆಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ?

೧೩. ಕೈಲಾಸ ಮರ್ತ್ಯಲೋಕವೆಂಬರು. ಕೈಲಾಸವೆಂದರೇನೋ? ಮರ್ತ್ಯವೆಂದರೇನೋ? ಅಲ್ಲಿಯು ನಡೆಯು ಒಂದೆ, ಇಲ್ಲಿಯು ನಡೆಯು ಒಂದೆ. ಅಲ್ಲಿಯ ನುಡಿಯು ಒಂದೆ, ಇಲ್ಲಿಯ ನುಡಿಯು ಒಂದೆ ಕಾಣಿ ರಯ್ಯಾ ಎಂಬರು. ಕೈಲಾಸದವರೆ ದೇವರ್ಕಳೆಂಬರು. ಮರ್ತ್ಯಲೋಕದ ವರೆ ಮಹಾಗಣಂಗಳೆಂಬರು. ಸುರಲೋಕದೊಳಗೆ ಸಾಸಿರ ಕಾಲಕ್ಕ ಲ್ಲದೆ, ಅಳಿವಿಲ್ಲವೆಂಬರು. ನರಲೋಕದೊಳಗೆ ಸತ್ತು ಸತ್ತು ಹುಟ್ಟುತಿಹ ರೆಂಬರು. ಇದಕಂಡು ನಮ್ಮ ಶಿವಶರಣರು ಸುರಲೋಕವನು ನರಲೋ ಕವನು ತೃಣವೆಂದು ಭಾವಿಸಿ, ಭವಕ್ಕೆ ದಾಂಟಿ, ತಮ್ಮ ತಮ್ಮ ಹುಟ್ಟನ ರಿದು, ಮಹಾ ಬೆಳಗನೆ ಕೂಡಿ, ಬೆಳಗಿನಲ್ಲಿ ಬಯಲಾದರಯ್ಯಾ ಅಪ್ಪಣ್ಣ ಪ್ರಿಯ ಚನ್ನಬಸವಣ್ಣ.

೧೪. ತನು ನಷ್ಟವಾದರೇನಯ್ಯಾ, ಮನ ನಷ್ಟವಾಗದನ್ನಕ್ಕ? ವಾಕ್ಕು ನಷ್ಟವಾದರೇನಯ್ಯಾ, ಬೇಕುಬೇಡೆಂಬುದನಳಿಯದನ್ನಕ್ಕ? ಅಂಗ ಸುಖ ನಷ್ಟವಾದಡೇನಯ್ಯಾ, ಕಂಗಳ ಪಟಲ ಹರಿಯದನ್ನಕ್ಕ? ಮನ ಮುಗ್ಧವಾದಡೇನಯ್ಯಾ, ಅಹಂಮೆಂಬುದ ಬಿಡದನ್ನಕ್ಕ? ಇವೆಲ್ಲರೊಳಗಿರ್ದ ವೆಲ್ಲ ನೆನೆಸಿಕೊಂಬವರ ನುಡಿಯ ಒಲ್ಲದು ನಮ್ಮ ಅಪ್ಪಣ್ಣಪ್ರಿಯ ಚನ್ನ ಬಸವಣ್ಣಾ.

೧೫. ಕಾಯವೆಂಬ ಕದಳಿಯನೆ ಹೊಕ್ಕು, ನೂನ ಕದಳಿಯ ದಾಂಟಿ, ಜೀವಪರಮನ ನೆಲೆಯನರಿದು, ಜನನಮರಣವ ಗೆದ್ದು, ಭವವ ದಾಂಟಿದಲ್ಲದೆ, ಘನವ ಕಾಣಬಾರದೆಂಬರು ನಮ್ಮ ಅಪ್ಪಣ್ಣಪ್ರಿಯ ಚನ್ನ ಬಸವಣ್ಣಾ.

೧೬. ನರರ ಬಿಡೆನು, ಸುರರ ಹಾಡೆನು. ಕರಣಂಗಳ ಹರಿಯ ಬಿಡೆನು. ಕಾಮನ ಬಲಿಗೆ ಸಿಲ್ಕೆನು. ಮರವೆಗೊಳಗಾಗೆನು. ಪ್ರಣವ ಪಂಚಾಕ್ಷರಿಯನೆ ಜಪಿಸಿಹೆನೆಂದು ತನುವ ಮರೆದು ನಿಜಮುಕ್ತಳಾದೆ ನಯ್ಯ ಅಪ್ಪಣ್ಣ ಪ್ರಿಯ ಚನ್ನಬಸವಣ್ಣಾ.

೧೭. ಅಯ್ಯಾ, ಏನೇನು ಇಲ್ಲದ ಬಯಲ ದೇಹಕ್ಕೆ, ತಾಮಸವ ಮುಂದು ಮಾಡಿ, ಹೀಗೆ ಕೆಟ್ಟಿತ್ತಲ್ಲ ಜಗವೆಲ್ಲ. ಅದೇನು ಕಾರಣವೆಂದಡೆ, ಸುಮುಖವ ಕಡೆಗಿತ್ತು ಜಗದ ರಚನೆಯ ನೋಡಿತ್ತು. ಇಚ್ಛೆಯ ಮಚ್ಚಿತ್ತು. ಅಂಗಸುಖವ ಬಯಸಿತ್ತು. ಕಂಗಳ ಕಾಮವನೆ ಮುಂದು ಮಾಡಿತ್ತು. ಇದರಿಂದ ಲಿಂಗವ ಮರೆಯಿತ್ತು. ಜಂಗಮವ ತೊರೆಯಿತ್ತು. ಇದು ಕಾರಣದಿಂದ ಜಗದ ಮನುಜರು ಭವಬಂಧನಕ್ಕೊಳಗಾದರು. ಇವೆಲ್ಲವನು ಹಿಂಗಿಸಿ ನಮ್ಮ ಶಿವಶರಣರು ಲಿಂಗದಲ್ಲಿಯೆ ಬೆರೆದರು. ಜಂಗಮಪ್ರಾಣವೆಂದು, ಪಾದೋದಕ ಪ್ರಸಾದವ ಕೊಂಡು, ಆ ಜಂಗಮದ ಪಾದದಲ್ಲಿ ನಿಜಮುಕ್ತರಾದರಯ್ಯ ನಮ್ಮ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೧೮. ಮರ್ತ್ಯದ ಮನುಜರು ತಾವು ಸತ್ಯರು ಸತ್ಯರು ಎನುತಿಪ್ಪರು. ಮತ್ತೆಮತ್ತೆ ಮರಳಿ, ಮಲಮೂತ್ರ ಕೀವಿನ ಕೋಣದ ಉಚ್ಚೆಯ ಬಚ್ಚಲ ಮೆಚ್ಚಿ. ಹುಚ್ಚುಗೊಂಡು ತಿರುಗುವ ಕತ್ತೆ ಮನುಜರ ಮೆಚ್ಚರು ನಮ್ಮ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.



೧೯. ಮರ್ತ್ಯದ ಮನುಜರು ಸತ್ತರೆನುತ್ತ, ಕತ್ತಲೆಯೊಳು ಮುಳುಗಿ, ಈ ಮಾತು ಕಲಿತುಕೊಂಡು ತೂತು ಬಾಯೊಳಗೆ ನುಡಿದು ಕಾತರಿಸಿ ಕಂಗೆಟ್ಟು, ಹೇಸಿಕೆಯ ಮಲದ ಕೋಣನ ಉಚ್ಚೆಯಬಾವಿಗೆ ಮಚ್ಚಿ ಕಚ್ಚಿಯಾಡಿ, ಹುಚ್ಚುಗೊಂಡು ತಿರುಗುವ ಕತ್ತೆ ಮನುಜರ ಮೆಚ್ಚರು ನಮ್ಮ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೨೦. ಒಡಕ ಮಡಿಕೆಯಂತೆ ಒಡೆದು ಹೋಗುವ, ಹಡಿಕಿಕಾಯುವ ನೆಚ್ಚಿ, ತಟತಟನೆ ತಾಗಿ, ಮತದ ಬೆಕ್ಕಾಗಿ ತಿಟ್ಟನೆ ತಿರುಗಿ, ಬಟ್ಟೆಯ ಲಿಕ್ಕಿ ಕಡಿವ ಕಳ್ಳನನರಿಯದೆ, ತಿಂಬ ಹುಲಿಯನರಿಯದೆ, ಒಡವೆಯ ಗಳಿಸಿಹೆನೆಂದು ಒಡೆಯನ ಮರೆದು, ತನ್ನ ಮಡದಿಮಕ್ಕಳಿಗೆಂದು ಆವರ ಒಡವೆರೆದು ಹೋಗುವ, ಒಡೆಯರೊಡನೆ ನುಡಿಯರು ನಮ್ಮ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೨೧. ಬಂಡಿಯ ಮೇಗಣ ಹೆಳವನಂತೆ, ಕಂಡಕಂಡ ಕಡೆಗೆ ಹಲುಬಿದರೆ, ನಿಮಗೆ ಬಂದುದೇನಿರೋ? ಆ ಮಹಾಘನವನರಿಯದನ್ನಕ್ಕ. ಹಾಡಿದರಿಲ್ಲ, ಹರಸಿದರಿಲ್ಲ, ಕೇಳಿದರಿಲ್ಲ. ಏನ ಮಾಡಿದರು ಮಾಯಕ್ಕೆ ನಾಯವೆಂದರು ನಮ್ಮ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೨೨. ಬೈಲು ಬಯಲಲ್ಲಿ ಒಂದು ಮೃಗವು ಹುಟ್ಟಿತ್ತು. ಅದ ಕಂಡಿಹೆನೆಂಬರಿಗೆ ಕಾಣಬಾರದು. ಹೇಳಿಹೆನೆಂಬರಿಗೆ ಹೇಳಬಾರದು. ಅದು ಚಿದ್ರೂಪ ಚಿನ್ಮಯವು. ಅದು ಗೊತ್ತ ಮೆಟ್ಟಿ ಆಡುವದನರಿಯದೆ, ಕತ್ತಲೆಯಲ್ಲಿ ಮುಳುಗಿ ಕಾಮನ ಬಾಧೆಗೆ ಶಿಲ್ಕಿ ಎತ್ತಲೆಂದರಿಯದೆ, ಭವಬಂಧನದಲ್ಲಿ ಮುಳುಗಿ ಕಾಲನ ಬಾಧೆಗೊಳಗಾಗಿ, ಸತ್ತುಹುಟ್ಟುವ ಮನುಜರ ಮತ್ತೆ ಶಿವಶರಣರ ಕೂಡಿ, ತತ್ವವ ಬಲ್ಲೆವೆಂದು, ತರ್ಕಕ್ಕೆ ಬಾಹರು. ಇದು ಹುಸಿ. ನಮ್ಮ ಶರಣರು ಇದ ಮೆಚ್ಚರು. ತತ್ವವೆಂಬುದನೆ ಮೆಟ್ಟಿ ಮಿಥ್ಯವ ನುಡಿವರ ತಮ್ಮ ಪುತ್ರರೆಂದು ಭಾವಿಸಿ, ಸತ್ತುಹುಟ್ಟುವರ ನೊತ್ತರಿಸಿ, ನಿಶ್ಚಿಂತದಲ್ಲಿ ನಿಜವ ನೆಮ್ಮಿ ಬಟ್ಟ ಬಯಲೊಳಗಣ ಮೃಗದ ಗೊತ್ತ ಮೆಟ್ಟಿ, ಬಚ್ಚ ಬರಿಯ ಬೆಳಗಿನೊಳಗಾಡುವ ಶರಣರ, ಈ ಸತ್ತು

ಮೆಟ್ಟಿ ಹುಳಿಸಿಕೊಂಬ, ಮಿಥ್ಯವಾದಿಗಳೆತ್ತ ಬಲ್ಲರು ನಿಮ್ಮ ನೆಲೆಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ?

೨೩. ನಾನೊಂದು ಹಾಳೂರಿಗೆ ಹೋದರೆ, ಅಲ್ಲಿ ನಾಯಿಗಳು ಅಟ್ಟಿಕೊಂಡು ಬಂದವು. ಹುಲಿಕರಡಿ ಅಡ್ಡಲಾದವು. ಇವ ಕಂಡು ನಾ ಹೆದರಿಕೊಂಡು, ನನ್ನ ಕೈಗೊಂದು ಕಲ್ಲ ತಕ್ಕೊಂಡು ನೋಡುತ್ತ ಬರುತಿರಲು, ಆ ನಾಯಿಗಳು ಓಡಿದವು. ಹುಲಿಕರಡಿಗಳು ಅಲ್ಲಿಯೇ ಬಯಲಾದವು. ಆ ಊರು ನಿರ್ಮಳವಾಯಿತ್ತು. ಆ ನಿರ್ಮಳವಾದ ಊರ ಹೊಕ್ಕು ನೋಡಲು, ಆ ನೋಡುವ ನೋಟವು, ಆ ಊರನಾಳುವ ಅರಸು ಆ ಊರಲೆ ಕೂಡಿ ಒಂದಾದರು. ಆ ಒಂದಾದುದನೆ ನೋಡಿ, ದ್ವಂದ್ವವನೆ ಹರಿದು, ನಿಮ್ಮ ಸಂಗಸುಖದೊಳಗೋಲಾಡಿ ಸುಖಿಯಾದೆನಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೨೪. ಕಂಡಿಹೆ ಕೇಳಿಹೆನೆಂದು ಮುಂದುಗಾಣದೆ, ಸಂದೇಹದಲ್ಲಿ ಮುಳುಗಿ ಕಳವಳಿಸಿ ಕಾತರಿಸುವ ಅಣ್ಣಗಳಿರಾ, ನೀವು ಕೇಳಿರೋ, ಹೇಳಿಹೆನು. ಕಾಣಬಾರದ ಘನವ ಹೇಳಬಾರದಾರಿಗೆಯು. ಹೇಳುವುದಕ್ಕೆ ನುಡಿ ಇಲ್ಲ. ನೋಡುವುದಕ್ಕೆ ರೂಪಿನ ತೆರಹಿಲ್ಲ. ಇಂತಾ ನಿರೂಪದ ಮಹಾಘನದ ಶರಣರ ಹೃದಯದಲ್ಲಿ ನೆಲೆಗೊಂಬುದಲ್ಲದೆ, ಈ ಜನನಮರಣಕ್ಕೊಳಗಾಗುವ ಮನುಜರೆತ್ತ ಬಲ್ಲರು ಈ ಮಹಾಘನದ ನೆಲೆಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ?

೨೫. ತನ್ನ ತಾನರಿಯದೆ ಅನ್ಯರಿಗೆ ಬೋಧೆಯ ಹೇಳುವ ಕುನ್ನಿಗಳೇ ನೀವು ಕೇಳಿರೋ. ಅವರ ಬಾಳುವೆ ಎಂತೆಂದರೆ, ಕುರುಡ ಕನ್ನಡಿಯ ಹಿಡಿದಂತೆ, ತನ್ನೊಳಗೆ ಮರೆದು, ಇದಿರಿಂಗೆ ಬೋಧೆಯ ಹೇಳಿ, ಉದರವ ಹೊರೆವ ಛೀಮಾರಿಗಳೆಲ್ಲರು ಹಿರಿಯರೆ? ಅಲ್ಲಲ್ಲ. ಇದ ಮೆಚ್ಚುವರೆ ನಮ್ಮ ಶರಣರು? ಅವರ ನಡೆ ಎಂತೆಂದರೆ, ಒಳಗನರಿದು ಹೊರಗೆ ಮರೆದು, ತನುವಿನೊಳಗಣ ಅನುವು ಹಸುಗೆಯ ಮಾಡಿದರು. ಪೃಥ್ವಿಗೆ ಅಪ್ಪುವಿನ ಅಧಿಕವ ಮಾಡಿದರು. ಅಗ್ನಿಯ ಹುದುಗಿದರು. ವಾಯುವ ಬೀರಿದರು. ಆಕಾಶದಲ್ಲಿ ನಿಂದರು. ಓಂಕಾರವನೆತ್ತಿದರು. ಆದರೊಡಗೂಡಿದರು. ಪ್ರಾಣದ ನೆಲೆಯನರಿದರು. ಪ್ರಮಾಣವನೊಂದುಗೂಡಿದರು.



ಮಹಾಬೆಳಗಿನಲ್ಲಿ ಓಲಾಡುವ ಶರಣರ ವಾಗ್ಜಾಲವ ಕಲಿತುಕೊಂಡು, ನುಡಿವ ಕಾಕುಮನುಜರೆತ್ತ ಬಲ್ಲರು ನಿಮ್ಮ ನೆಲೆಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ?

೨೬. ತನುವೆಂಬ ಹುತ್ತಕ್ಕೆ ಮನವೆಂಬ ಸರ್ಪ ಆವರಿಸಿ ಹೆಡೆ ಎತ್ತಿ ಆಡುತ್ತಿರಲು, ಆ ಸರ್ಪನ ಕಂಡು ನಾ ಹೆದರಿಕೊಂಡು, ಗುರುಕರುಣವೆಂಬ ಪರುಷವ ತಂದು ಮುಟ್ಟಿಸಲು, ನೋಟ ನಿಂದಿತ್ತು, ಹೆಡೆ ಅಡಗಿತ್ತು, ಗುರುಕರುಣವೆಂಬ ಪರುಷವೆ ನಿಂದಿತ್ತು. ನಿಂದ ಪರುಷವನೆ ಕೊಂಡು ನಿಜದಲ್ಲಿ ನಿರ್ವಯಲಾಗುವ ಶರಣರ ಪಾದವ ನಂಬಿ ಕೆಟ್ಟು ಬಟ್ಟಬಯಲಾದೆನಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೨೭. ಬಸವಣ್ಣ, ಚನ್ನಬಸವಣ್ಣ, ಮಡಿವಾಳಯ್ಯ, ಅಲ್ಲಮಪ್ರಭು, ಚನ್ನಮಲ್ಲೇಶ್ವರ, ಹಡಪದಪ್ಪಣ್ಣ, ತಮ್ಮೆಲ್ಲರ ತೊತ್ತಿನ ತೊತ್ತಿನ ಪಡಿದೊತ್ತಿನ ಮಗಳೆಂದು ಹೊತ್ತುಹೊತ್ತಿಗೆ ಎಚ್ಚರವ ಪಾಲಿಸಿ ರಕ್ಷಣೆಯ ಮಾಡಿದ ಕಾರಣದಿಂದ ತಮ್ಮೆಲ್ಲರ ಪಾದದಲ್ಲಿಯೆ ನಿಜಮುಕ್ತಳಾದೆನಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೨೮. ಏನೇನು ಇಲ್ಲದಾಗ ನೀವಿಲ್ಲದಿದ್ದರೆ, ನಾನಾಗಬಲ್ಲೆನೇ ಅಯ್ಯ? ಆದಿಅನಾದಿ ಇಲ್ಲದಂದು ನೀವಿಲ್ಲದಿದ್ದರೆ, ನಾನಾಗಬಲ್ಲೆನೇ ಅಯ್ಯ? ಮುಳುಗಿ ಹೋದವರ ತೆಗೆದುಕೊಂಡು ನಿಮ್ಮ ತೊತ್ತಿನ ತೊತ್ತಿನ ಪಡಿದೊತ್ತಿನ ಮಗಳೆಂದು, ರಕ್ಷಣೆಯ ಮಾಡಿದ ಶಿಸುವಾದ ಕಾರಣ ಹಡಪದಪ್ಪಣ್ಣನೆ ಎನ್ನ ಕರಸ್ಥಲಕ್ಕೆ ಲಿಂಗವಾಗಿ ಬಂದು ನೆಲೆಗೊಂಡರು. ಚನ್ನಮಲ್ಲೇಶ್ವರನೆ ಎನ್ನ ಮನಸ್ಥಲಕೆ ಪ್ರಾಣವಾಗಿ ಮೂರ್ತಗೊಂಡರು. ಆ ಕರಸ್ಥಲದ ಲಿಂಗವನರ್ಚಿಸಿ ಪೂಜಿಸಿ, ವರವ ಬೇಡಿದರೆ, ತನುವ ತೋರಿದರು. ಆ ತನುವಿಡಿದು ಮಹಾಘನವ ಕಂಡೆ. ಆ ಘನವಿಡಿದು ಮನವ ನಿಲಿಸಿದೆ. ಮನವ ನಿಲಿಸಿ ನೋಡುವನ್ನಕ್ಕ ಪ್ರಾಣದ ನೆಲೆಯನರಿದೆ. ಪ್ರಾಣವನೊಂದುಗೂಡಿದೆ. ಕಾಣಬಾರದ ಗುಕದಳಿಯನೆ ಹೊಕ್ಕು ನೂನ ಕದಳಿಯ ದಾಂಟಿದೆ. ಜ್ಞಾನಜ್ಯೋತಿಯ ಕಂಡೆ. ತಾನುತಾನಾಗಿಪ್ಪ, ಮಹಾಬೆಳಗಿನಲ್ಲಿ ಓಲಾಡಿ ಸುಖಿಯಾದೆನಯ್ಯ ಚನ್ನಬಸವಣ್ಣನ ಕರುಣದ ಶಿಸುವಾದ ಕಾರಣದಿಂದ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೨೯. ಪೃಥ್ವಿಯನೆ ಆದಿಯ ಮಾಡಿ, ಅಪ್ಪುವಿನಲ್ಲಿ ಗೋಡೆಯನಿಕ್ಕಿ, ಅಗ್ನಿಯನೆ ಅಪ್ಪುವಿನೊಳಗೆ ಹುದುಗಿಸಿ, ಅಗ್ನಿಯನೆ ಬೀಸಿ, ವಾಯುವನೆ ಬೀರಿ, ಆಕಾಶವನೆ ಹೊದಿಸಿ, ಸಹಸ್ರದಳ ಕಮಲವನೆ ಮೇಲು ಕಟ್ಟಕಟ್ಟಿ, ಬಯಲಮಂಟಪವ ಶೃಂಗಾರವ ಮಾಡಿ, ಒಡೆಯನಾಭರಣವ ಹಾರುತಿದ್ದೆನಯ್ಯ. ಒಡೆಯನಾಭರಣವ ಹಾವೈಸುವದ ಕಂಡು, ಹಡಪದಪ್ಪಣ್ಣನೆ ಕರ್ಪುರದ ಸಿಂಹಾಸನವಾಗಿ ನಿಂದರು. ಆದಕ್ಕೆ ಚನ್ನ ಮಲ್ಲೇಶ್ವರನೆ ಜ್ಯೋತಿರ್ಮಯಲಿಂಗವಾಗಿ ಬಂದು ನೆಲೆಗೊಂಡರು. ಜ್ಯೋತಿರ್ಮಯ ಲಿಂಗವು ಕರ್ಪುರವು ಏಕವಾಗಿ ಪ್ರಜ್ವಲಿಸಿ ಪರಮ ಪ್ರಕಾಶವಾಯಿತ್ತು. ಈ ಬೆಳಗಿನಲ್ಲಿ ನಾ ನಿಜಮುಕ್ತಳಾದೆನಯ್ಯ ಚನ್ನ ಮಲ್ಲೇಶ್ವರ ಅಪ್ಪಣ್ಣಪ್ರಿಯ ಚನ್ನಬಸವಣ್ಣ.

೩೦ ಅಯ್ಯ ನಾನು ಬಂದ ಭವಾಂತರದಲ್ಲಿ ನೀವು ಕಡೆ ಹಾಯಿಸಿದಿರೆಂಬುದನರಿಯೆ. ಕಂಗಳಿಗೆ ಕನ್ನಡಿಯ ತೋರಿದರು. ನಿಮ್ಮ ಕಾಣದೆ ಇದ್ದೆನಯ್ಯ. ಅದು ಕಾರಣದಿಂದ ಮನಕೆ ಪ್ರಾಣವಾಗಿ ಬಂದು ನಿಂದಿರಿ. ತನುವಿಂಗೆ ರೂಪಾಗಿ ಬಂದು ಸುಳಿದಿರಿ. ನಿಮ್ಮ ಸುಳುಹ ಕಾಣಲೊಡನೆ ಎನ್ನ ತನು ಕರಗಿ ಮನ ಮಗ್ನವಾಯಿತ್ತು. ಎನ್ನ ಮರಣದ ಭಯ ಹಿಂಗಿತ್ತು. ಎನ್ನ ಕಾಯಗುಣ ಕೆಟ್ಟಿತ್ತು. ಕರಣಗುಣ ಸುಟ್ಟವು. ಭವವಳಿಯಿತ್ತು. ಬಯಕೆ ಸವೆಯಿತ್ತು. ಮಹಾದೇವನಾದ ಶರಣ ಚನ್ನಮಲ್ಲೇಶ್ವರನ ಪಾದವಿಡಿದು, ನಿಜಮುಕ್ತಳಾದೆನಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೩೧. ಕನಿಷ್ಠದಲ್ಲಿ ಹುಟ್ಟಿದೆ. ಉತ್ತಮದಲ್ಲಿ ಬೆಳೆದೆ. ಸತ್ಯಶರಣರ ಪಾದವಿಡಿದೆ. ಆ ಶರಣರ ಪಾದವಿಡಿದು ಗುರುವ ಕಂಡೆ. ಲಿಂಗವ ಕಂಡೆ. ಜಂಗಮವ ಕಂಡೆ. ಪ್ರಸಾದವ ಕಂಡೆ. ಪಾದೋದಕವ ಕಂಡೆ. ಇಂತಿವರ ಕಂಡೆನ್ನ ಕಂಗಳ ಮುಂದಣ ಕತ್ತಲೆ ಹರಿಯಿತ್ತು. ಕಂಗಳ ಮುಂದಣ ಕತ್ತಲೆ ಹರಿಯಲೊಡನೆ ಮಂಗಳ ಮಹಾ ಬೆಳಗಿನೊಳಗೋಲಾಡಿ ಸುಖಿಯಾದೆನಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೩೨. ಕಾಣಬಾರದ ಕದಳಿಯಲೊಂದು ಮಾಣಿಕ ಹುಟ್ಟಿತ್ತು. ಇದಾರಿಗು ಕಾಣಬಾರದು. ಮಾರೆನೆಂದರೆ ಮಾನವರಿಗೆ ಸಾಧ್ಯವಾಗದು. ಸಾವಿರಕೆ ಬೆಲೆಯಾಯಿತ್ತು. ಆ ಬೆಲೆಯಾದ ಮಾಣಿಕ ನಮ್ಮ ಶರಣರಿಗೆ



ಸಾಧ್ಯವಾಯಿತ್ತು. ಆ ಮಾಣಿಕವ ಹೇಗೆ ಬೆಲೆಮಾಡಿ ಮಾರಿದರೆಂದರೆ, ಕಾಣಬಾರದ ಕದಳಿಯ ಹೊಕ್ಕು, ನೂನ ಕದಳಿಯ ದಾಂಟಿ, ಜಲವ ಶೋಧಿಸಿ, ಮನವ ನಿಲಿಸಿ, ತನುವಿನೊಳಗಣ ಅನುವ ನೋಡುವನ್ನಕ್ಕ ಮಾಣಿಕ ಸಿಕ್ಕದು. ಆ ಮಾಣಿಕದ ಬೆಳಗ ನೋಡಿಹೆನೆಂದು ಮನುಜರನೆ ಮರೆದು, ತಾನು ತಾನಾಗಿ ಜ್ಞಾನಜ್ಯೋತಿಯ ಬೆಳಗಿನೊಳಗೋಲಾಡಿ ಸುಖಿಯಾದೆನಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೩೩. ಮಾಣಿಕವ ಕಂಡವರು ತೋರುವರುಂಟೇ? ಮುತ್ತ ಕಂಡವರು ಅಪ್ಪಿಕೊಂಬುವರಲ್ಲದೆ, ಬಿಚ್ಚಿ ತೋರುವರೇ? ಆ ಮುತ್ತಿನ ನೆಲೆಯನು ಮಾಣಿಕ್ಯದ ನೆಲೆಯನು ಬಿಚ್ಚಿ ಬೇರಾಗಿ ತೋರಿ ರಕ್ಷಣೆಯ ಮಾಡಿದ ಕಾರಣದಿಂದ, ಬಚ್ಚ ಬರಿಯ ಬೆಳಗಿನೊಳಗೋಲಾಡಿ ನಿಮ್ಮ ಪಾದದೊಳಗೆ ನಿಜಮುಕ್ತಳಾದೆನಯ್ಯ ಚನ್ನಮಲ್ಲೇಶ್ವರ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೩೪. ನಾಮ ರೂಪು ಕ್ರಿಯೆಗಿಲ್ಲದ ಘನವ ನಾಮರೂಪಿಂಗೆ ತಂದಿರಯ್ಯ. ಅದೇನು ಕಾರಣವೆಂದರೆ, ನನ್ನ ಮನಕ್ಕೆ ಚನ್ನಮಲ್ಲೇಶ್ವರನಾದಿರಿ. ಹೀಗೆಂದು ನಿಮ್ಮ ನಾಮಾಂಕಿತ ಹೀಗಾದರೂ ಕಾಣಲರಿಯರು. ನಡೆ ನುಡಿ ಚೈತನ್ಯವಿಡಿದು, ಕರದಲ್ಲಿ ಲಿಂಗವ ಪಿಡಿದು, ಚನ್ನಮಲ್ಲೇಶ್ವರನೆಂಬ ನಾಮಾಂಕಿತವಿಡಿದು ಬರಲಾಗಿ ಮರ್ತ್ಯಲೋಕದಲ್ಲಿ ತನ್ನ ನೆನೆವ ಶಿವ ಭಕ್ತರ ಪಾವನವ ಮಾಡಬೇಕೆಂದು ಬಂದು, ಭೂಮಿಯ ಮೇಲೆ ಲೀಲೆಯ ನಟಸಿ, ತಮ್ಮ ಪಾದದಲ್ಲಿ ನಿಜಮುಕ್ತಳ ಮಾಡಿದಿರಯ್ಯ ಚನ್ನಮಲ್ಲೇಶ್ವರನು ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೩೫. ಅಯ್ಯ ನರರೊಳು ಹುಟ್ಟಿ, ಮರಹಿನೊಳಗೆ ಬಿದ್ದು, ಒಳ ತಂದು ಮಹಾಶರಣರೊಳು ಎನ್ನ ನಿಲಿಸಿ ಕುರುಹ ತೋರಿದರು. ಗುರುವೆಂಬುದನರುಹಿದರು. ಜಂಗಮವೆಂಬುದನರುಹಿದರು. ಅವರ ನೆಲೆವಿಡಿದು ಮನವ ನಿಲಿಸದೆ, ಕಾಯಜೀವವೆಂಬುದನರಿದೆ. ಭವಬಂಧನವ ಹರಿದೆ. ಮನವ ನಿರ್ಮಳವ ಮಾಡಿದೆ. ಬೆಳಗಿದ ದರ್ಪಣದಂತೆ, ಚಿತ್ತ ಶುದ್ಧವಾದಲ್ಲಿ, ನೀವು ಅಚ್ಚೊತ್ತಿದ್ದ ಕಾರಣದಿಂದ ನಿಮ್ಮ ಪಾದವಿಡಿದು ನಾ ನಿಜಮುಕ್ತಳಾದೆನಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೩೬. ಈ ಮಹಾದೇವನ ಸ್ತೋತ್ರವ ಮಾಡುವದಕ್ಕೆ ಜಿಹ್ವೆ ಮೆಟ್ಟದು. ಆ ಮಹಾದೇವನ ಸ್ತೋತ್ರವ ಕೇಳುವದಕ್ಕೆ ಕರ್ಣ ಮೆಟ್ಟದು. ಮುಟ್ಟಿ ಪೂಜಿಸಿಹೆನೆಂದರೆ, ಹಸ್ತ ಕೆಟ್ಟದು. ನೋಡಿಹೆನೆಂದರೆ ನೋಟಕ್ಕೆ ಅಗೋಚರ, ಅಪ್ರಮಾಣ. ಇಂತು ನಿಶ್ಚಿಂತ ನಿರಾಳ ಬಯಲ ದೇಹ ಎನ್ನಲ್ಲಿ ಅಚ್ಚೊತ್ತಿದಂತೆ ನಿಂದ ಕಾರಣದಿಂದ ಬಟ್ಟಬಯಲನೆ ಕಂಡೆ. ಮಹಾ ಬೆಳಗನೆ ಕೂಡಿದೆ. ಚಿತ್ತದಲ್ಲಿ ಚನ್ನಮಲ್ಲೇಶ್ವರನು ನೆಲೆಗೊಂಡ ಕಾರಣದಿಂದ ನಾನೆತ್ತ ಹೋದೆನೆಂದರಿಯೆನಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೩೭. ಎನ್ನ ಸತ್ಯಳಮಾಡಿ, ನಿತ್ಯವ ತೋರಿ, ತತ್ವವೆಂಬುದನರುಹಿದಿರಿ. ಮತ್ಸರವ ಹಿಂಗಿಸಿದಿರಿ. ಆಸೆರೋಷವನೆ ಹಿಂಗಿಸಿದಿರಿ. ಮಾತುಮಥನವನೆ ಕೆಡಿಸಿದಿರಿ. ವ್ಯಾಕುಳವನೆ ಕೆಡಿಸಿ, ಜ್ಯೋತಿಯ ಬೆಳಗ ತೋರಿದಿರಯ್ಯ ಚನ್ನಮಲ್ಲೇಶ್ವರನು ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೩೮. ಅಯ್ಯ ನಾ ಕಾಂಬುದಕ್ಕೆ ನನ್ನ ಶಕ್ತಿಯಲ್ಲ. ನಿಮ್ಮಿಂದವೆ ಕಂಡೆನಯ್ಯ. ಅದೇನು ಕಾರಣವೆಂದರೆ, ತನುವ ತೋರಿದಿರಿ, ಮನವ ತೋರಿದಿರಿ, ಧನವ ತೋರಿದಿರಿ, ತನುವ ಗುರುವಿಗಿತ್ತು, ಮನವ ಲಿಂಗಕಿತ್ತು, ಧನವ ಜಂಗಮಕಿತ್ತು ಇವೆಲ್ಲವು ನಿಮ್ಮೊಡವೆ ಎಂದು ನಿಮಗಿತ್ತು, ತಳ್ಳಿಬಳ್ಳಿಯನೆ ಹರಿದು, ನಿಮ್ಮಲ್ಲಿಯೆ ನೆಲೆಗೊಂಡ ಕಾರಣ ಚನ್ನಮಲ್ಲೇಶ್ವರನ ಪಾದದಲ್ಲೆ ನಿರ್ಮುಕ್ತಳಾದೆನಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೩೯. ಅಯ್ಯ ಅದೇನು ಕಾರಣವೆಂದರೆ, ಕಂಗಳ ಕತ್ತಲೆಯನೆ ಹರಿಸಿದಿರಿ. ಮನದ ಕಾಳಿಕೆಯನೆ ಹಿಂಗಿಸಿದಿರಿ. ಮಾತಿನ ಮೊದಲನೆ ಹರಿದಿರಿ. ಜ್ಯೋತಿಯ ಬೆಳಗ ತೋರಿದಿರಿ. ಮಾತು ಮಥನವ ಕೆಡಿಸಿದಿರಿ. ವ್ಯಾಕುಳವನೆ ಬಿಡಿಸಿ ವಿವೇಕಿಯ ಮಾಡಿ ನಿಮ್ಮ ಪಾದದಲ್ಲಿ ಏಕವಾದ ಕಾರಣದಿಂದ ನಾ ನಿಜಮುಕ್ತಳಾದೆನಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೪೦. ಅಯ್ಯ ನಾ ಹುಟ್ಟುವಾಗ ಬಟ್ಟಬಯಲೆ ಗಟ್ಟಿಯಾಯಿತ್ತು. ಆ ಬಟ್ಟಬಯಲು ಗಟ್ಟಿಯಾದ ಬಳಿಯಲ್ಲಿ ನಾ ಜನನವಾದೆ. ಜನನವಾದವರಿಗೆ ಮರಣ ತಪ್ಪದು. ಅದೇನು ಕಾರಣವೆಂದರೆ, ಮರವೆಗೆ ಮುಂದು ಮಾಡಿತ್ತು. ಕರ್ಮಕ್ಕೆ ಗುರಿ ಮಾಡಿತ್ತು. ಕತ್ತಲೆಯುಲ್ಲಿ ಮುಳು



ಗಿಸಿತ್ತು. ಕಣ್ಣುಗಾಣದ ಅಂಧಕರಂತೆ, ತಿರುಗುವದ ನೋಡಿ ನಾ ಹೆದರಿಕೊಂಡು, ಎಚ್ಚತ್ತು ಚಿತ್ತವ ಸುಯಿಧಾನವ ಮಾಡಿ, ನಿಶ್ಚಿಂತವಾಗಿ ನಿಜವ ನೆಮ್ಮಿ, ಅರುಹ ಕಂಡೆ. ಅರುಹಿಂದ ಆಚಾರವ ಕಂಡೆ. ಆಚಾರವಿಡಿದು ಗುರುವ ಕಂಡೆ. ಗುರುವಿಡಿದು ಲಿಂಗವ ಕಂಡೆ. ಲಿಂಗವಿಡಿದು ಜಂಗಮವ ಕಂಡೆ. ಜಂಗಮವಿಡಿದು ಪಾದೋದಕ ಪ್ರಸಾದವ ಕಂಡೆ. ಆ ಪಾದೋದಕ ಪ್ರಸಾದವಿಡಿದು ಮಹಾಶರಣನ ಕಂಡೆ. ಆ ಮಹಾಶರಣನ ಪಾದವಿಡಿದು ಎನ್ನ ಕಾಯಗುಣವಳಿಯಿತ್ತು. ಕರಣ ಗುಣ ಸುಟ್ಟವು. ಲಿಂಗಗುಣ ನಿಂದಿತ್ತು. ಭಾವಬಯಲಾಯಿತ್ತು. ಬಯಕೆ ಸವೆಯಿತ್ತು. ಮಹಾದೇವನಾದ ಶರಣನ ಪಾದವಿಡಿದು ನಿಜಮುಕ್ತಳಾದೆನಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೪೧. ದಾರಿವಿಡಿದು ಬರಲು, ಮುಂದೆ ಸರೋವರವ ಕಂಡೆ, ಆ ಸರೋವರದ ಮೇಲೆ ಮಹಾಘನವ ಕಂಡೆ. ಮಹಾಘನವಿಡಿದು, ಮನವ ನಿಲಿಸಿ, ಕಾಯಗುಣಗಳನುಳಿದು, ಕರಣಗುಣವ ಸುಟ್ಟು, ಆಶೆಯನೆ ಅಳಿದು, ರೋಷವನೆ ನಿಲಿಸಿ, ಜಗದೀಶ್ವರನಾದ ಶರಣರ ಮರ್ತ್ಯದ ಹೇಸಿಗಳೆತ್ತ ಬಲ್ಲರು ಅಪ್ಪಣ್ಣಪ್ರಿಯ ಚನ್ನಬಸವಣ್ಣಾ?

೪೨ ತನುವ ಕರಗಿಸಿ, ಹರಿವ ಮನವ ನಿಲಿಸಿ, ಅಂಗಗುಣವನೆ ಅಳಿದು, ಲಿಂಗಗುಣವನೆ ನಿಲಿಸಿ, ಭಾವವಳಿದು ಭವಕೆ ಸವಿದು, ಮಹಾದೇವನಾದ ಶರಣರ ಜಗದ ಮಾನವರೆತ್ತ ಬಲ್ಲರು ಅಪ್ಪಣ್ಣಪ್ರಿಯ ಚನ್ನಬಸವಣ್ಣಾ?

೪೩. ಮನ ನಿರ್ಮಳವ ಮಾಡಿದೆನೆಂದು, ತನುವ ಕರಗಿಸಿ, ಮನವ ಬಳಲಿಸಿ, ಕಳವಳಿಸಿ, ಕಣ್ಣುಕಾಣದೆ ಅಂಧಕರಂತೆ ಮುಂದುಗಾಣದೆ, ಸಂದೇಹದಲ್ಲಿ ಮುಳುಗಿರುವ ಮನುಜರಿರಾ. ನೀವು ಕೇಳಿರೋ, ಹೇಳಿಹೆನು. ಆ ಮನವ ನಿರ್ಮಳವ ಮಾಡಿ, ಆ ಘನವ ಕಾಂಬುವದಕ್ಕೆ ಆ ಮನ ಎಂತಾಗಬೇಕೆಂದರೆ, ಗಾಳಿ ಬೀಸದ ಜಲದಂತೆ, ಮೋಡವಿಲ್ಲದ ಸೂರ್ಯನಂತೆ, ಬೆಳಗಿದ ದರ್ಪಣದಂತೆ, ಮನ ನಿರ್ಮಳವಾನಲ್ಲದೆ, ಆ ಮಹಾಘನವ ಕಾಣಬಾರದೆಂದರು ನಮ್ಮ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೪೪. ತನುವೆಂಬ ರಾಜ್ಯಕ್ಕೆ ಮನವೆಂಬ ಅರಸು. ಅರಸಿಂಗೆ ನೋಟ ಬೇಟದವರಿಬ್ಬರು. ಅಟ್ಟ ಮಣಿಹ ಹರಿಮಣಿಹದವರು. ಅವರು ಸುತ್ತ ಓಲೈಸುವರು ಇಪ್ಪತ್ತೈದು ಮಂದಿ. ಅವರಿಂಗೆ ಕತ್ತಲೆ ಬಲೆಯ ಬೀಸಿ ಕೆಡಹಿ, ಅರಸಿನ ಗೊತ್ತುವಿಡಿದು, ಪುರವನೇರಿ, ನಿಶ್ಚಿಂತವಾಗಿ, ನಿಜದಲ್ಲಿ ನಿರ್ವಯಲನೆಯ್ದುವ ಶರಣರ ಪಾದವ ಹಿಡಿದು, ಎತ್ತ ಹೋದೆನೆಂದರಿಯೆನಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೪೫. ಅಯ್ಯ ನಿಮ್ಮ ಚರಣವಿಡಿದು, ಮನವ ನಿಲಿಸಿದೆ. ತನುವ ಮರೆದೆ. ಮಹಾಘನವ ಕಂಡೆ. ಲಿಂಗದ ನೆಲೆವಿಡಿದೆ. ಅಂಗವ ಲಿಂಗವೆಂದು ನೋಡಲು, ಕಂಗಳ ಮುಂದಣ ಬೆಳಗೆ ಲಿಂಗವಾಗಿ, ಆ ಕಂಗಳ ಮುಂದಣ ಬೆಳಗ ನೋಡಿಹೆನೆಂದು, ಸಂಗಸುಖವ ಮರೆದು, ಆ ಮಂಗಳದ ಮಹಾಬೆಳಗಿಲೆ ನಾ ನಿಜಮುಕ್ತಳಾದೆನಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೪೬. ಮನ ಕತ್ತಲೆ, ತನು ಹಮ್ಮು, ನೆನಹು ಮರವೆ, ಇವರೊಳಗೆ ಇದ್ದುಗನವ ಕಂಡಿಹೆನೆಂಬ ಅಣ್ಣಗಳಿರಾ ನೀವು ಕೇಳಿರೋ, ಘನವ ಕಾಂಬುದಕ್ಕೆ ಮನವೆಂತಾಗಬೇಕೆಂದರೆ, ಅಕ್ಕಿಯ ತಳಿಸಿದಂತೆ, ಅಲ್ಲ ಸುಲಿದಂತೆ, ಕನ್ನಡಿಯ ನೋಡಿದಂತೆ, ಮನ ನಿರ್ಮಳವಾದಲ್ಲದೆ, ಘನವ ಕಾಣಬಾರದು ನಮ್ಮ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೪೭. ನಿರಾಳ ಲಿಂಗವ ಕಾಂಬುದಕ್ಕೆ ಮನ ಮತ್ತೊಂದೆಡೆಗೆ ಹರಿಯದಿರಬೇಕು. ನೆನಹು ಲಿಂಗವಲ್ಲದೆ ಮತ್ತೊಂದ ನೆನೆಯದಿರಬೇಕು. ತನುವಿನಲ್ಲಿ ಮರಹಿಲ್ಲದಿರಬೇಕು. ಕಾಳಿಕೆ ಹೋಗದಿರಬೇಕು. ಇಂತು ನಿಶ್ಚಿಂತವಾಗಿ, ಚಿತ್ತಾರದ ಬಾಗಿಲವ ತೆರೆದು, ಮುತ್ತುಮಾಣಿಕ ನವರತ್ನ ತೆತ್ತಿಸಿವಂತಿರುವ ಉಪ್ಪರಿಗೆ ಮೇಗಳ ಶಿವಾಲಯವ ಕಂಡು, ಮನ ಅಜ್ಯೋತಿದಂತಿರ್ದು, ಇತ್ತ ಮರೆದು ಅತ್ತಲೆ ನೋಡಿ, ನಿಜಮುಕ್ತಳಾದೆನಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೪೮. ರಸ ಒಡೆದಂತೆ, ದೆಸೆದೆಸೆಯನಾಲಿಸುವ ಮನವ ತನ್ನ ವಶವ ಮಾಡಿ ನಿಲಿಸಿ, ಹುಸಿಯ ಬಿಟ್ಟು, ಮಾಯೆಯ ಬಲಿಯ ನುಸುಳಿ ತಾ ನಿಶ್ಚಿಂತನಾಗಿ, ದೀರವೀರನಾದಲ್ಲದೆ ಆ ಮಹಾ ಘನವ ಕಾಣಬಾರದು ಎಂದರು ನಮ್ಮ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.



೪೯. ಮನವ ನಿಲ್ಲಿಸಿಹೆನೆಂದು, ಆ ಮನದ ನೆಲೆಗಾಣದೆ ಅರುಹುಮರವೆಗೊಳಗಾಗಿ, ಕಳವಳ ಮುಂದುಮಾಡಿ, ಚಿಂತೆ ಸಂತೋಷವ ನೋಡಲು, ಭ್ರಾಂತಿಗೊಂಡು ತಿರುಗುವ ಮನುಜರಿರಾ ನೀವು ಕೇಳಿರೋ. ಮನವ ನಿಲ್ಲಿಸುವುದಕ್ಕೆ ಶರಣರ ಸಂಗ ಬೇಕು. ಜನನ ಮರಣವ ಗೆಲಿಯಬೇಕು. ಗುರುಲಿಂಗಜಂಗಮದಲ್ಲಿ ವಂಚನೆ ಇಲ್ಲದೆ, ಮನದ ಸಂಚಲವ ಹರಿದು, ನಿಶ್ಚಿಂತವಾಗಿ ನಿಜವ ನಂಬಿ ಚಿತ್ತ ಸುಯಿಧಾನವಾದಲ್ಲದೆ, ಮನದೊಳಗೆ ಲಿಂಗವು ಅಜ್ಯೋತಿದಂತಿರಬೇಕೆಂದರು ನಮ್ಮ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೫೦. ಕಂಗಳ ಮುಂದಣ ಬೆಳಗ ಕಾಣದೆ, ಕಂಡಕಂಡವರ ಹಿಂದೆ ಹರಿದು, ಇನ್ನು ಬೇರೆ ಕಂಡೆನೆಂಬ ಭಂಗಿತರ ನೋಡಾ! ತನ್ನಲ್ಲಿ ತಾ ಸುಯಿಧಾನಿಯಾಗಿ ನೋಡಲರಿಯದೆ, ಭಿನ್ನಗಣ್ಣಿಲಿ ನೋಡಿಹೆನೆಂದು ತಮ್ಮ ಮರೆದು ಇನ್ನುಂಟೆಂದು ಅರಸುವ ಅಣ್ಣಗಳಿರಾ ನೀವು ಕೇಳಿರೋ, ಮನವು ಮಹದಲ್ಲಿ ನಿಂದುದೆ ಲಿಂಗ. ಕರಣಂಗಳರತುದೆ, ಕಂಗಳ ಮುಂದಣ ಬೆಳಗು. ಇದನರಿಯದೆ, ಮುಂದೆ ಘನ ಉಂಟೆಂದು, ತೊಳಲಿ ಬಳಲಿ ಅರಸಿಹೆನೆಂದು ಅರುಮರುಳಾಗಿ ಹೋದರಯ್ಯ ನಿಮ್ಮನರಿಯದ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೫೧. ಘಟವೆಂಬ ಮಠದೊಳಗೆ ಮನವೆಂಬ ಮರ ಹುಟ್ಟಿತ್ತು. ಬೇರುವರಿಯಿತ್ತು. ಅದಕೆ ಶತಕೋಟಿ ಶಾಖೆ ಬಿಟ್ಟಿತ್ತು. ಆಸೆ ಬೆಂಬಳಿಗೊಂಡು, ಆಡುವರೆಲ್ಲ ಮುಂದುಗಾಣದೆ, ಸಂದು ಹೋದರು. ನಮ್ಮ ಶರಣರು ಇದನರಿದು, ಹಿಂದೆ ನೋಡಿ, ಮುಂದೆ ಲಿಂಗದಲ್ಲಿ ಬೆರೆದ ಭೇದವ ಕಂಡು, ಮನವೆಂಬ ಮರದ ಬೇರನಗಿದು, ಶತಕೋಟಿ ಶಾಖೆಯನು ಸವರಿ, ತುಟ್ಟತುದಿಯ ಮೇಲೆ ನಿಂದು, ನೋಡುವನ್ನಕ್ಕ, ನಾನೆತ್ತ ಹೋದೆನೆಂದರಿಯೆನಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣ.

೫೨. ಹೊತ್ತು ಹೊತ್ತಿಗೆ ಮತ್ತೆ ತಿಪ್ಪೆಯಲ್ಲಿ ಕರ್ಪುರವನರಸುವಂತೆ, ತಿಪ್ಪೆಯಂತಹ ಒಡಲೊಳಗೆ ಕರ್ಪುರವನರಸಿಹೆನೆಂಬ ಅಣ್ಣಗಳಿರಾ ನೀವು ಕೇಳಿರೋ, ಹೇಳಿಹೆನು. ಆ ಕರ್ಪುರವನರಸುವದಕ್ಕೆ ಚಿತ್ತ ಹೇಗಾಗಬೇಕೆಂದರೆ, ಜಲದೊಳಗಣ ಸೂರ್ಯನ ಪ್ರತಿಬಿಂಬದಂತಿರಬೇಕು. ಮೋಡವಿಲ್ಲದ ಚಂದ್ರಮನಂತಿರಬೇಕು. ಬೆಳಗಿದ ದರ್ಪಣದಂತಿರಬೇಕು. ಇಂತು

ಚಿತ್ತ ಶುದ್ಧವಾದಲ್ಲದೆ, ಕರ್ತೃವಿನ ನೆಲೆಯು ಕಾಣಬಾರದೆಂದರು ನಮ್ಮ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೫೩. ಬಯಲು ದೇಹದಲ್ಲಿ ಒಂದು ತೊಲಗದ ಕಂಬವ ಕಂಡೆ. ಆ ತೊಲಗದ ಕಂಬವ ಹಿಡಿದು ಹೋಗುವನ್ನಕ್ಕ, ಮುಂದೆ ಸರೋವರವ ಕಂಡೆ. ಆ ಸರೋವರವ ಒಳಹೊಕ್ಕು ನೋಡಲು, ಮುಂದೆ ಗಟ್ಟಿಬೆಟ್ಟಗಳು ಹೋಗಬಾರದ ಆನೆಗಳು ಅಡ್ಡಲಾದವು. ಕೋಣ ಮುಂದುವರಿದವು. ನಾಯಿಗಳಟ್ಟಿಕೊಂಡು ಬಂದವು. ಇರುಹು ಕಚ್ಚಿಕೊಂಡು ಬಿಡವು. ಇದ ಕಂಡು ನಾ ಹೆದರಿಕೊಂಡು, ಮನವೆಂಬ ಅರಸನ ಹಿಡಿದು, ಕಟ್ಟಿಗೆ ತಂದು, ಗೊತ್ತಿಗೆ ನಿಲಿಸಿ, ಆ ಅರಸನ ಶಕ್ತಿವಿಡಿದು, ಆ ಸರೋವರದೊಳಗಣ ಗಟ್ಟಿಬೆಟ್ಟವನೆ ದಾಂಟಿ, ಅಷ್ಟಮದವನೆ ಹಿಟ್ಟುಗುಟ್ಟಿ, ಕೋಡಗನ ಕೊರಳ ಮುರಿದು, ನಾಯಿಗಳನೆ ಕೊಂದು, ಈ ಇರುಹಿನ ಗೂಡಿಗೆ ಕಿಚ್ಚನಿಕ್ಕಿ ನಿರ್ಮಳವಾದ ದೇಹದಲ್ಲಿ ನಿಂದು, ಮುಂದುವರಿದು ನೋಡಲು ಇಟ್ಟೆಡೆಯ ಬಾಗಿಲ ಕಂಡೆ. ಆ ಇಟ್ಟೆಡೆಯ ಬಾಗಿಲ ಹೊಕ್ಕು, ಹಿತ್ತಿಲಬಾಗಿಲ ಕದವ ತೆಗೆದು ನೋಡಲು, ಬಟ್ಟಬಯಲಾಯಿತ್ತು. ಆ ಬಟ್ಟಬಯಲಲ್ಲಿ ನಿಂದು, ನಾನೆತ್ತ ಹೋದೆನೆಂದರಿಯೆನಯ್ಯ ನಿಮ್ಮ ಪಾದವಿಡಿದು, ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೫೪. ತನುವೆಂಬ ಹುತ್ತದಲ್ಲಿ, ಮನವೆಂಬ ಸರ್ಪ ಹೆಡೆಯನುಡಿಗಿಕೊಂಡಿರಲು, ಜ್ಞಾನಶಕ್ತಿ ಬಂದು ಎಬ್ಬಿಸಲು, ಉರಿ ಭುಗಿಲೆನುತ್ತ ಹೆಡೆಯನೆತ್ತಿ ಊರ್ಧ್ವಕ್ಕೇರಲು, ಅಷ್ಟಮದವೆಲ್ಲ ಹಿಟ್ಟುಗುಟ್ಟಿದವು. ಕರಣಂಗಳೆಲ್ಲ ಉರಿದು ಹೋದವು. ಇದ್ದ ಶಕ್ತಿಯನೆ ಕಂಡು, ಮನ ನಿಶ್ಚಯವಾದುದನೆ ಕಂಡು, ಪಶ್ಚಿಮದ ಕದವ ತೆಗೆದು, ಬಚ್ಚಬರಿಯ ಬೆಳಗಿನೊಳಗೆ ಓಲಾಡಿ ಸುಖಿಯಾದೆನಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೫೫. ಮರ್ತ್ಯದಲ್ಲಿ ಹುಟ್ಟಿ ಎತ್ತಲೆಂದರಿಯೆ. ಕತ್ತಲೆಯೊಳು ಮುಳುಗಿ, ಕಾಮನ ಬಲೆಯೊಳು ಸಿಲ್ಕಿದ ಎಗ್ಗ ಮನುಜರಿರಾ, ನೀವು ಕೇಳಿರೋ. ನಿಮ್ಮ ಇರವು ಎಂತೆಂದರೆ, ಕಾಯವೆಂದರೆ ಕಳವಳಕ್ಕೊಳಗಾಯಿತ್ತು. ಜೀವವೆಂದರೆ ಅರುಹು ಮರವೆಯೊಳಗಾಯಿತ್ತು. ಮನವೆಂದರೆ ಸಚರಾಚರವನೆಲ್ಲವನಾಚರಿಸುವದಕ್ಕೆ ಒಳಗಾಯಿತ್ತು. ಪ್ರಾಣವೆಂದರೆ ಇವೆಲ್ಲವನು ಆಡಿಸಿ ನೋಡುವದಕ್ಕೆ ಒಳಗಾಯಿತ್ತು. ಇದರೊಳಗೆ ಬಿದ್ದು ಏಳಲಾರದ ಬುದ್ಧಿಹೀನರಿರಾ, ನೀವು ಕೇಳಿ, ಹೇಳಿಹೆನು. ನಮ್ಮ ಶರಣರು ಜಗದೊಳಗೆ ಹುಟ್ಟಿ ಜಗವನೆ ಮರೆದು, ಎಚ್ಚತ್ತು, ಚಿತ್ತವ ಸುಯಿಧಾನವಮಾಡಿ, ಕಳವಳಕ್ಕೊಳಗಾಗಿರ್ದ ಕಾಯವನೆ ಸರ್ವಾಂಗ ಲಿಂಗವನೆ ಮಾಡಿದರು. ಅರುಹುಮರವೆಯೊಳಗಾಗಿರ್ದ ಜೀವನ ಬುದ್ಧಿಯನೆ, ಪರಮನ ಬುದ್ಧಿಯ ಮಾಡಿದರು. ಸಚರಾಚರವ ಚರಿಸುವದಕ್ಕೊಳಗಾಗಿರ್ದ ಮನವನೆ ಅರುಹ ಮಾಡಿದರು. ಆಡಿಸಿ ನೋಡೋದಕ್ಕೆ ಒಳಗಾಗಿರ್ದ ಪ್ರಾಣವನೆ ಲಿಂಗವ ಮಾಡಿದರು. ಈ ಸರ್ವಾಂಗವನು ಲಿಂಗವನೆ ಮಾಡಿ, ಆ ಲಿಂಗವನು ಕಂಗಳಲ್ಲಿಯೆ ಹೆರೆಹಿಂಗದೆ ನೋಡಿ, ಮಂಗಳದ ಮಹಾಬೆಳಗಿನಲ್ಲಿ ಬಯಲಾದೆನಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.



೫೬. ಮುಕ್ತಿಯ ಪಥದನರಿವುದಕ್ಕೆ ತತ್ವದ ಭಿತ್ತಿಯು ಕಾಣಬೇಕು. ಚಿತ್ತ ಲಿಂಗದಲ್ಲಿ ಅಚ್ಚೊತ್ತಿದಂತಿರಬೇಕು. ಮರ್ತ್ಯದ ಮಾನವರ ಸಂಗವ ಹಿಂಗಬೇಕು, ತಾನುತಾನಾದ ಲಿಂಗೈಕ್ಯವನರಿವಡೆ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೫೭. ಅಂಗವೆಂದರೆ ಲಿಂಗದೊಳಡಗಿತ್ತು. ಲಿಂಗವೆಂದರೆ ಅಂಗದೊಳಡಗಿತ್ತು. ಅಂಗದೊಳಡಗಿದ ಲಿಂಗವನೆ ಕಂಗಳಲ್ಲಿ ಹೆರೆಹಿಂಗದೆ ನೋಡಿದರೆ, ಮಂಗಳದ ಮಹಾಬೆಳಗು ಕಾಣಿಸಿತ್ತು. ಇಂತಪ್ಪ ಮಂಗಳದ ಮಹಾಬೆಳಗ ತೋರಿದ ಶರಣಂಘ್ರಿಗೆರಗಿ ಸುಖಿಯಾದೆನಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೫೮. ಅಂತರಂಗ ಬಹಿರಂಗ ಶುದ್ಧವಿಲ್ಲದೆ ನುಡಿವರು, ಸಂತೆಯ ಸೂಳೆಯರಂತೆ. ಅಂತರಂಗ ಬಹಿರಂಗವೆಂಬುದಿಲ್ಲ. ನಮ್ಮ ಶಿವಶರಣರಿಗೆ ಅಂತರಂಗವೆಲ್ಲ ಅರುಹಾಯಿತ್ತು. ಬಹಿರಂಗವೆಲ್ಲ ಲಿಂಗವಾಯಿತ್ತು. ಆ ಲಿಂಗದಲ್ಲಿ ನುಡಿದು, ಲಿಂಗದಲ್ಲಿ ನಡೆದು, ಲಿಂಗದಲ್ಲಿ ಮುಟ್ಟಿ, ಲಿಂಗದಲ್ಲಿ ವಾಸಿಸಿ, ಲಿಂಗದಲ್ಲಿ ಕೇಳಿ, ಲಿಂಗವಾಗಿ ನೋಡಿ, ಸರ್ವಾಂಗವು ಲಿಂಗವಾಗಿ, ಆ ಲಿಂಗವ ನೋಡುವ ಕಂಗಳಲ್ಲಿ ಐಕ್ಯ ಕಂಡ್ಯಾ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೫೯. ಕನಲಿಯ ಬನದೊಳಗಿರುವ ಲಿಂಗವ ಅರಸಿದರೆ ಕಾಣಬಾರದು. ನೋಡಿದರೆ ನೋಟಕ್ಕಿಲ್ಲ. ಹಿಡಿದರೆ ಹಸ್ತಕ್ಕಿಲ್ಲ. ನೆನೆದರೆ ಮನ

ಕ್ಕಗೋಚರ. ಇಂತು ಮಹಾಘನವ ಹೃದಯದಲ್ಲಿ ನೆಲೆಗೊಳಿಸಿದ ಶರಣನ ಕಂಗಳಲ್ಲಿ ಹೆರಿಹಿಂಗದೆ ನೋಡಿ, ಅವರಂಘ್ರಿಯಲ್ಲಿ ಐಕ್ಯವಾದೆನಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೬೦. ಈ ಪರಂಜ್ಯೋತಿ ಪ್ರಕಾಶವಾದ ಬೆಳಗ ನೋಡಿ ನೋಟವ ಮರೆದೆ. ಕೂಡಿ ಕೂಟವ ಮರೆದೆ. ತಾನು ತಾನಾಗಿಪ್ಪ ಮಹಾಬೆಳಗಿನಲ್ಲಿ ಲೋಲಾಡಿ ಸುಖಿಯಾದೆನಯ್ಯ ಚನ್ನಮಲ್ಲೇಶ್ವರನ ಕರುಣವಿಡಿದು ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೬೧. ಬಚ್ಚಬರಿಯ ಬೆಳಗ ನೋಡಿಹೆನೆಂದು, ಮನೆಯಾತನ ಮಂಕು ಮಾಡಿದೆ. ಭಾವನ ಬಯಲು ಮಾಡಿದೆ. ಕಂದನ ಕಣ್ಣ ಮುಚ್ಚಿದೆ. ಸಿಂದೆ ಕುಂದುಗಳ ಮರೆದೆ. ಜಗದ ಹಂಗ ಹರಿದೆ. ಜಂಗಮದ ಪಾದೋದಕ ಪ್ರಸಾದವ ಕೊಂಡ ಕಾರಣದಿಂದ ಮಂಗಳದ ಮಹಾಬೆಳಗಿನಲ್ಲಿ ಓಲಾಡಿ ಸುಖಿಯಾದೆನೈಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೬೨. ಕರಣವ ಸುಟ್ಟೆ. ಕಂದಲ ನೋಡಿದೆ. ಮರನ ಮುರಿದೆ. ಬಣ್ಣವ ಹರಿದೆ. ಬಿನ್ನಗಣ್ಣು ಕೆಟ್ಟಿತ್ತು. ಜ್ಞಾನಗಣ್ಣಿಲಿ ನಿಮ್ಮನೆ ನೋಡಿ ಕೂಡಿ ಸುಖಿಯಾದೆನಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೬೩. ಸಾಕೈಯ್ಯ ಲೋಕದ ಹಂಗು ಹರಿಯಿತ್ತು. ತನುವಿನಾಸೆ ಬಿಟ್ಟಿತ್ತು. ಮನದ ಸಂಚಲ ನಿಂದಿತ್ತು. ನುಡಿಯ ಗಡಣ ಹಿಂಗಿತ್ತು. ಘನವ ಬೆರೆಯಿತ್ತು. ಬೆಳಗ ಕೂಡಿತ್ತು. ಬಯಲೊಳಗೋಲಾಡಿ ಸುಖಿಯಾದೆನಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೬೪. ಕತ್ತಲೆ ಬೆಳಗೆಂಬುದಿಲ್ಲ ನಿತ್ಯನಾದಂಗೆ. ಚಿತ್ತಪರಚಿತ್ತವೆಂಬುದಿಲ್ಲ ವಸ್ತುವಿನ ನೆಲೆಯ ಕಂಡವಂಗೆ. ನಿತ್ಯ ಅನಿತ್ಯವೆಂಬುದಿಲ್ಲ ಕರ್ತೃತಾನಾದವಂಗೆ. ಈ ಮೂವರ ಗೊತ್ತುವಿಡಿದು ನಿಶ್ಚಿಂತನಾಗಿ ನಿರ್ವಯಲನಾದ ಶರಣರ ಪಾದಕ್ಕೆ ಶರಣೆಂದು ಸುಖಿಯಾದೆನಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೬೫. ಸಂಸಾರಾಯದ ಮುಂದೆ ಸತ್ತ ಹಾಗೆ ಇರುವರು. ಆರಿಗೆ ವಶವಲ್ಲ, ನಮ್ಮ ಶರಣರಿಗಲ್ಲದೆ. ಅದು ಹೇಗೆಂದರೆ, ಹಗಲಿರುಳೆಂಬ ಹಂಬಲ ಹಂ

570.



ಬರು. ಜಗದಾಟವ ಮರೆದರು. ಆಡದ ಲೀಲೆಯನೆ ಆಡಿದರು. ಆರು ಕಾಣದ ಘನವನೆ ಕಂಡರು. ಮಹಾ ಬೆಳಗಿನಲಿ ಲೋಲಾಡಿ ಸುಖಿಯಾದೆನೈಯ್ಯ ನಮ್ಮ ಅಪ್ಪಣ್ಣಪ್ರಿಯ ಚನ್ನಬಸವಣ್ಣ.

೬೬. ಕಂಡಿಹೆ ಕೇಳಿಹೆನೆಂಬ ದ್ವಂದ್ವವ ಹಿಂಗಿ, ಉಂಡಿಹೆ ಉಟ್ಟಿಹೆನೆಂಬ ಹಂಗವ ಬಿಟ್ಟು, ನಡಿದಿಹೆ ನುಡಿದಿಹೆನೆಂಬ ಮಾಟವ ನಿಲಿಸಿ, ಜಗದಾಟವ ನಿಲಿಸಿ, ಮಾಟ ಕೂಟ ಜಗದಾಟ ಕೋಟಲೆಯೊಳು ಸಿಕ್ಕದೆ ದಾಟಿ ಹೋದ ಶರಣರ ಪಾದಕ್ಕೆ ಶರಣೆಂದು ಬದುಕಿದೆನಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣ.

೬೭. ಕಂಡು ಕೇಳಿಹೆನೆಂಬ ದಂದುಗ ಬಿಟ್ಟು, ನೋಡಿ ನುಡಿವೆನೆಂಬ ನೋಟವ ನಿಲಿಸಿ, ಮಾಡಿ ಕೂಡಿಹೆನೆಂಬ ಮನ ನಿಂದು, ತನುವ ಮರೆದು, ತಾ ನಿಜ ಸುಖಿಯಾದಲ್ಲದೆ, ಘನವ ಕಾಣಬಾರದೆಂದರು ನಮ್ಮ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೬೮. ಮರನನೇರಿದೆ. ಬೇರ ಸವರಿದೆ. ಕೊನೆಯ ತರಿದೆ. ಬುಡವ ಕೆಡಹಿದೆ. ನಿರಾಲಂಬವಾಗಿ ನಿಮ್ಮ ಬೆಳಗನೆ ನೋಡಿ ಸುಖಿಯಾದೆನಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೬೯. ನೆನೆದಿಹೆನೆಂದರೆ, ಏನ ನೆನೆವೆನಯ್ಯ! ಮನ ಮಂಕಾಯಿತ್ತು. ತನು ಬಯಲಾಯಿತ್ತು. ಕಾಯ ಕರಗಿತ್ತು. ದೇಹ ಹಮ್ಮಳಿಯಿತ್ತು. ತಾನು ತಾನಾಗಿ, ಬೆಳಗಿನೊಳಗೋಲಾಡಿ ಸುಖಿಯಾದೆನಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೭೦. ಬಟ್ಟಬಯಲಲ್ಲಿ ಒಂದು ಮರ ಹುಟ್ಟಿತ್ತು. ಅದಕ್ಕೆ ಸುತ್ತಲು ಬೇರು ಆವರಿಸಿತ್ತು. ಅದಕ್ಕೆ ಶತಕೋಟಿ ಕೊನೆ ಬಿಟ್ಟಿತ್ತು. ಅಡಗಿದ ಬೇರನೆ ಸವರಿ, ಶತಕೋಟಿ ಕೊನೆಯನೆ ಕಡಿದು, ಮರ ಒಣಗಿತ್ತು. ಉಲುಹು ನಿಂದಿತ್ತು. ಎಲೆ ಉದುರಿತ್ತು. ತರಗೆಲೆಯಾದ ಶರಣರ ಚರಣವಿಡಿದು, ನಿಜಮುಕ್ತಳಾದೆನಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣ.

೭೧. ತುಂಬಿದ ಮನೆಯು ಹೊಕ್ಕರೆ ದೊಂದಳವಾಯಿತ್ತು. ಈ ಸಂದಳಿಗಾರದೆ, ತುಂಬಿದ ಮನೆಯ ಕಿಚ್ಚನಿಕ್ಕಿದರೆ, ನಿಶ್ಚಿಂತವಾಯಿತ್ತು. ಬಟ್ಟಬರಿಯ ಮನೆಯೊಳಗೆ ನಿಮ್ಮ ಬೆಳಗನೆ ನೋಡಿ ಸುಖಿಯಾದೆನಯ್ಯ ಅಪ್ಪಣ್ಣ ಪ್ರಿಯ ಚನ್ನಬಸವಣ್ಣ.

೭೨. ಒಂದು ಊರಿಗೆ ಒಂಬತ್ತು ಬಾಗಿಲು, ಆ ಊರಿಗೆ ಐವರು ಕಾವಲು, ಆರು ಮಂದಿ ಪ್ರಧಾನರು, ಇಪ್ಪತ್ತೈದು ಮಂದಿ ಪರಿವಾರ, ಅವರೊಳು ತೊಟ್ಟನೆ ತೊಳಲಿ ಬಳಲಲಾರದೆ, ಎಚ್ಚತ್ತು ನಿಶ್ಚಿಂತನಾದ ಅರಸರ ಕಂಡೆ. ಅರಸಿನ ಗೊತ್ತುವಿಡಿದು, ಒಂಬತ್ತು ಬಾಗಿಲಿಗೆ ಲಿಂಗ ಸ್ಥಾಪ್ಯವ ಮಾಡಿ, ಒಂದು ಬಾಗಿಲಲ್ಲಿ ನಿಂದು, ಕಾವಲರ ಕಟ್ಟಿ, ಪ್ರಧಾನಿಯನೆ ಮೆಟ್ಟಿ ಸೀಳಿ, ಪರಿವಾರವನೆ ಸುಟ್ಟು, ಅರಸ ಮುಟ್ಟಿ, ಹಿಂದು ಓಲೈಸಲು, ಸಪ್ತಧಾತು ಷಡುವರ್ಗವನೆ ಕಂಡು, ಕತ್ತಲೆಯ ಕದಳಿಯ ದಾಂಟಿ, ನಿಶ್ಚಿಂತದಲ್ಲಿ ಬಚ್ಚಬರಿಯ ಬೆಳಗಿನೊಳಗೆಯೋಲಾಡಿ, ಸುಖಿಯಾದೆನಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೭೩. ಒಂದು ಹುತ್ತಕ್ಕೆ ಒಂಬತ್ತು ಬಾಗಿಲು ಇರುವದು. ಒಂದು ಸರ್ಪ ಒಂಬತ್ತು ಬಾಗಿಲಲ್ಲಿಯು ನೋಡುತಿಪ್ಪದು. ಒಂಬತ್ತು ಬಾಗಿಲಿಗೆ ಕದವನಿಕ್ಕಿ ಒಂದು ಬಾಗಿಲ ಅಗುಳಿ ದಾರವಂದವನಿಕ್ಕಿ ಬಲಿಯಲು ತಿರುಗುವುದಕ್ಕೆ ತಾವ ಕಾಣದೆ, ಇರುವುದಕ್ಕೆ ಇಂಬ ಕಾಣದೆ, ನಿಲುವುದಕ್ಕೆ ಎಡೆಯ ಕಾಣದೆ, ಉರಿ ಎದ್ದು ಊರ್ಧ್ವಕ್ಕೇರಲು, ಶರಧಿ ಬತ್ತಿತ್ತು. ಅಲ್ಲಿದ್ದ ಖಗಮೃಗವೆಲ್ಲ ದಹನವಾದವು. ಸರೋವರವೆಲ್ಲ ಉರಿದು ಹೋದವು. ಕತ್ತಲೆ ಹರಿಯಿತ್ತು. ಮುಂದೆ ದಿಟ್ಟಿಸಿ ನೋಡುವನ್ನಕ್ಕ, ಇಟ್ಟೆಡೆಯ ಬಾಗಿಲು ಸಿಕ್ಕಿತ್ತು. ಆ ಇಟ್ಟೆಡೆಯ ಬಾಗಿಲ ಹೊಕ್ಕು ಹೊಡಕರಿಸಿ, ಪಶ್ಚಿಮದ ಕದವ ತೆಗೆದು, ಬಟ್ಟ ಬಯಲಲ್ಲಿ ನಿಂದು, ನಾನೆತ್ತ ಹೋದೆನೆಂದರಿಯೆನಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೭೪. ಆಧಾರವ ಬಲಿಯೆ, ಬೇಗ ಉರಿಯಿತ್ತು. ಆ ಕಿಚ್ಚು ಆವರಿಸಿ ಊರ್ಧ್ವಕ್ಕೇರಿತ್ತು. ಸಾಸಿರದಳ ಅಮೃತ ಕೊಡ ಕಾಯಿತ್ತು. ಕಾದ ಅಮೃತ ಉಕ್ಕಿ ತೊಟ್ಟಕ್ಕಿ ಅಮೃತವನುಂಡು ಹಸಿವೆ ಕೆಟ್ಟಿತ್ತು. ತೃಷೆಯಡಗಿತ್ತು. ನಿದ್ರೆ ಅರತಿತ್ತು. ಅಂಗಗುಣವಳಿಯಿತ್ತು. ಲಿಂಗಗುಣ ನಿಂದಿತ್ತು. ಸಂಗಸುಖ ಹಿಂಗಿ, ಅಂಗಲಿಂಗವೆಂಬ ಉಭಯವಳಿದು, ಮಂಗಳ ಮಹಾ ಬೆಳಗಿನಲ್ಲಿ ಓಲಾಡಿ ಸುಖಿಯಾದೆನಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೭೫. ಅಯ್ಯ ನಾನು ಊರ ಮರೆದು ಅಡ ಹೋದರೆ ಒಕ್ಕಲು ಹೆಚ್ಚಿ ಸೊಕ್ಕಾಟ ಘನವಾಯಿತ್ತು. ಇದ ಕಂಡು ಊರ ಹೊಕ್ಕೆ, ಸ್ಥಾನದಲ್ಲಿ ನಿಂದೆ, ಒಂಬತ್ತು ಬಾಗಿಲ ಕದವನಿಕ್ಕಿದೆ. ಜ್ಞಾನಾಗ್ನಿಯು ಹೊತ್ತಿಸಲು, ಉರಿ ಎದ್ದಿತ್ತು. ಉಷ್ಣ ಊರ್ಧ್ವಕ್ಕೇರಿತ್ತು. ತಲೆ ಎತ್ತಿ ನೋಡಲು



ಒಕ್ಕಲು ಓಡಿತ್ತು. ಊರು ಬಯಲಾಯಿತ್ತು. ಆ ಬಯಲನೆ ನೋಡಿ ನಿರಾಳದೊಳಗಾಡಿ, ಮಹಾಬೆಳಗನೆ ಕೂಡಿ ಸುಖಿಯಾದೆನಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೭೬. ಸಾಸಿರ ದಳಕಮಲವೆಂದರೆ, ಸೂಸಿಕೊಂಡಿರುವ ಮನ. ಪವನವೆಂದರೆ, ಎಲ್ಲೆಡೆಯಲ್ಲಿ ಸೂಸಿ ಆಡುವಂಥಾದ್ದು. ಬಿಂದುವೆಂದರೆ, ಆಗುಮಾಡುವಂಥಾದ್ದು. ಈ ಮನಪವನಬಿಂದು, ಮೂರನು ಒಡಗೂಡಿ ನೋಡಲು ಪರಂಜ್ಯೋತಿ ಪ್ರಕಾಶವಾದಂಥ ಬೆಳಗೆ ಎನ್ನ ಕಂಗಳ ಮುಂದೆ ನಿಂದಿತ್ತು. ಆ ಮಹಾ ಬೆಳಗನೆ ಕಂಗಳಲ್ಲಿ ಹೆರೆ ಹಿಂಗದೆ ನೋಡಿದರೆ, ಎನ್ನಂಗದ ಹವಣ ಹೊರಗೆ ಪರಿಪೂರ್ಣವಾಗಿದ್ದಿತ್ತು ಕಾಣಾ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ ನಿಮ್ಮ ಪಾದ ಕರುಣದಿಂದ.

೭೭. ದಾರಿವಿಡಿದು ಬರಲು, ಮುಂದೆ ಸರೋವರವ ಕಂಡೆ. ಸರೋವರದ ಮೇಲೊಂದು ಮಹಾದಳದ ಕಮಲವ ಕಂಡೆ. ಆ ಕಮಲವರಳಿ ವಿಕಸಿತವಾಯಿತ್ತು. ಪರಿಮಳವೆಸಗಿತ್ತು. ಆ ಪರಿಮಳದ ಬೆಂಬಳಗೊಂಡು ಹೋಗುತಿರಲು, ಮುಂದೆ ಒಂದು ದಾರಿಯ ಕಂಡು, ಆ ಮುಂದಳ ದಾರಿಯಲ್ಲಿ ಹೋದವರೆಲ್ಲರು ನಿಂದೆ ಕುಂದುಗಳಿಗೊಳಗಾಗಿ ಸಂದು ಹೋದರು. ಇದ ಕಂಡು ನಾ ಹೆದರಿಕೊಂಡು ಎಚ್ಚತ್ತು, ಚಿತ್ತವ ಸುಯಿಧಾನವ ಮಾಡಿ ಹಿತ್ತಿಲ ಬಾಗಿಲಕದವ ತೆಗೆದು, ನೋಡಿದರೆ ಬಟ್ಟ ಬಯಲಾಗಿದ್ದಿತ್ತು. ಆ ಬಟ್ಟಬಯಲೊಳಗೆ, ಮಹಾ ಬೆಳಗನೆ ನೋಡ ನಾ ಎತ್ತ ಹೋದೆನೆಂದರಿಯೆನಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೭೮. ಪಶ್ಚಿಮದ ಕದವ ತೆಗೆದು, ಬಚ್ಚಬರಿಯ ಬೆಳಗನೋಡಲೊಲ್ಲದೆ, ಕತ್ತಲೆಯ ಬಾಗಿಲಿಗೆ ಮುಗ್ಗಿ ಕಣ್ಣುಗಾಣದ ಅಂಧಕರಂತೆ, ಜಾರಿ ಜಾರಿ ಎಡವಿಬಿದ್ದು, ಕರ್ಮಕ್ಕೆ ಗುರಿಯಾಗುವ ಮರ್ತ್ಯದ ಮನುಜರಿರಾ ನೀವು ಕೇಳಿರೋ ಹೇಳಿಹೆನು. ನಮ್ಮ ಶರಣರ ನಡೆ ಎಂತೆಂದರೆ, ಕತ್ತಲೆಯ ಬಾಗಿಲಿಗೆ ಗದವನಿಕ್ಕೆ ಪಶ್ಚಿಮದ ಕದವ ತೆಗೆದು, ಬಚ್ಚಬರಿಯ ಬೆಳಗಿನೊಳಗೆ ಲೋಲಾಡುವ ಶರಣರ ಪಾದಕ್ಕೆ ಮತ್ತೊಂದು ಬಾರಿ ಎರಗಿ ಸುಖಿಯಾದೆನಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೭೯. ಬಟ್ಟಬಯಲಲ್ಲಿ ಒಂದು ಶರಧಿ ಹುಟ್ಟಿತ್ತು. ಆ ಶರಧಿಯ ನಡುವೆ ಒಂದು ಕಮಲ ಹುಟ್ಟಿತ್ತು. ಆ ಕಮಲದ ನೆಲೆಯ ಕಾಣಲ

ರಿಯದೆ, ತೊಳಲಿ ಬಳಲಿ, ಜಗದೊಳಗೆ ನಚ್ಚುಮಚ್ಚಿಗೊಳಗಾಗಿ, ಚುಚ್ಚಳಿ
ಪೂಜೆಗೆಸಿಲ್ಕಿ ಕುಲಕೆ ಛಲಕೆ ಕೊಂದಾಡಿ, ಭವಕೆ ಗುರಿಯಾಗುವ ಮನು
ಜರ ಕಂಡು, ನಾಚಿತ್ತೆನ್ನ ಮನವು. ಈ ಮನದ ಬೆಂಬಳಿಗೊಂಡು,
ಹೋದವರೆಲ್ಲ ಮರುಳಾಗಿ ಹೋದರು. ಇದ ನೋಡಿ ನಾನು ಬಟ್ಟ
ಬಯಲಲ್ಲಿ ನಿಂದು ನೋಡಿದರೆ, ಶರಧಿ ಬತ್ತಿತ್ತು, ಕಮಲ ಕಾಣಬಂದಿತ್ತು,
ಆ ಕಮಲ ವಿಕಾಸವಾಯಿತ್ತು. ಪರಿಮಳವೆಂಬ ವಾಸನೆ ತೀಡಿತ್ತು. ಆ
ವಾಸನೆವಿಡಿದು, ಜಗದಾಸೆಯ ಹಿಂಗಿ, ಮಾತುಮಥನವ ಕೆಡಿಸಿ ಮಹಾ
ಜ್ಯೋತಿಯ ಬೆಳಗಿನಲಿ ಓಲಾಡುವ ಶರಣರ ಆಸೆರೋಷ ಪಾಶಕ್ಕೊಳಗಾದ
ಈ ಜಗದ ಹೇಸಿಗಳೆತ್ತ ಬಲ್ಲರು ಈ ಮಹಾ ಶರಣರ ನೆಲೆಯ ಅಪ್ಪಣ್ಣ
ಪ್ರಿಯ ಚನ್ನಬಸವಣ್ಣಾ?

೮೦. ನಿಶ್ಚಿಂತವಾದವಂಗೆ ಮತ್ತಾರ ಹಂಗುಂಟೆ? ಚಿತ್ತ ಸುಯಿ
ಧಾನಿಯಾದವಂಗ ತತ್ವವ ಕಂಡಿಹೆನೆಂಬುದುಂಟೆ? ತಾನು ತಾನಾದವಂಗೆ
ಮಾನವರ ಹಂಗುಂಟೆ? ಭಾವ ಬಯಲಾದವಂಗೆ ಬಯಕೆ ಎಂಬುದುಂಟೆ?
ಗೊತ್ತ ಕಂಡವಂಗೆ ಅತ್ತಿತ್ತ ಅರಸಲುಂಟೆ? ಇಂತು ನಿಶ್ಚಿಂತವಾಗಿ
ನಿಜವ ನಂಬಿದ ಶರಣರ ಎನಗೊಮ್ಮೆ ತೋರಿಸಯ್ಯ ಅಪ್ಪಣ್ಣಪ್ರಿಯ
ಚನ್ನಬಸವಣ್ಣಾ.

೮೧. ಕರುಳು ಒಣಗಿತ್ತು. ತನು ಕರಗಿತ್ತು. ಮನ ನಿಂದಿತ್ತು.
ವಾಯು ಬರತ್ತಿತ್ತು. ಅಪ್ಪು ಆರತಿತ್ತು. ಹಿಪ್ಪೆ ಉಳಿಯಿತ್ತು. ನೆನಹು
ನಿಷ್ಪತ್ತಿಯಾಗಿ, ಬೆಳಗನೆ ಬೆರೆದ ಶರಣರ ಜನನ ಮರಣಕ್ಕೊಳಗಾದ ಮನು
ಜರೆತ್ತ ಬಲ್ಲರೊ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ?

೮೨. ನಿರ್ಮಳವಾದ ದೇಹದಲ್ಲಿ ಇನ್ನೊಂದು ಕಲ್ಪಿಸಲುಂಟೆ?
ಲಿಂಗವಾದ ತನುವಿನೊಳಗೆ ಜಂಗಮದ ನೆನಹಲ್ಲದೆ, ಇನ್ನೊಂದರ ನೆನ
ಹುಂಟೆ? ಪ್ರಸಾದವಾದ ಕಾಯದೊಳಗೆ ತನ್ನ ಪ್ರಾಣಲಿಂಗದ ನೆನಹ
ಲ್ಲದೆ, ಇನ್ನೊಂದರ ನೆನಹುಂಟೆ? ಈ ಸರ್ವಾಂಗವು ಲಿಂಗವಾಗಿ, ಜಂಗ
ಮವೆ ಪ್ರಾಣವಾಗಿ, ಅವರ ಪಾದದಲ್ಲಿ ನಾ ನಿಜ ಮುಕ್ತಳಾದೆನಯ್ಯ
ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೮೩. ಜಂಗಮವೆ ಜಗತ್ಪಾವನವಯ್ಯ! ಜಂಗಮದ ನೆನಹೆ ಲಿಂಗ
ವಾಯಿತ್ತು. ಅವರ ತನುವೆ ಎನ್ನ ಕಾಯವಾಯಿತ್ತು. ಅವರ ದರ್ಶನ



ವೆನಗೆ ಪರುಷವಾಯಿತ್ತು. ಆ ಪರುಷವಿಡಿದು ಮನ ಲಿಂಗದಲ್ಲಿ ಬೆರಸಿ,
ಕನಸು ಕಳವಳಿಕೆ ಹೆಸರುಗೆಟ್ಟು ಹೋದವಯ್ಯ ಅಪ್ಪಣ್ಣಪ್ರಿಯ ಚನ್ನಬಸ
ವಣ್ಣಾ.

೮೪. ಮಾಯದ ಬೊಂಬೆಯ ಮಾಡಿ, ಕಂಗಳಿಗೆ ಕಾಮನ ಬಾಣವ
ಹೂಡಿ, ನಡೆನುಡಿಯೊಳಗೆ ರಂಜಕದ ತೊಡಿಗೆಯನೆ ತೊಡಿಸಿ, ಮುಂದು
ಗಾಣಿಸದೆ ಹಿಂದನರಸದೆ. ಲಿಂಗವ ಮರಹಿಸಿ, ಜಂಗಮವತೋರಿಸದೆ,
ಸಂದೇಹದಲ್ಲಿ ಸತ್ತುಹುಟ್ಟುವ, ಈ ಭವ ಬಂಧನಿಗಳೆತ್ತ ಬಲ್ಲರೋ ಈ
ಶರಣರ ನೆಲೆಯ? ಅವರ ನೆಲೆ ತಾನೆಂತೆಂದರೆ, ಹಿಂದನರಿದು, ಮುಂದೆ
ಲಿಂಗದಲ್ಲಿ ಬೆರೆವ ಭೇದವ ಕಂಡು, ಜಗವ ಜಂಗುಳಿಗಳ ಹಿಂಗಿ, ಕಂ
ಗಳ ಕರುಳನೆ ಕೊಯಿದು, ಮನದ ತಿರುಳನೆ ಹುರಿದು, ಅಂಗಲಿಂಗ
ವೆಂಬ ಉಭಯವಳಿದು, ಸರ್ವಾಂಗ ಲಿಂಗವಾಗಿ, ಮಂಗಳದ ಮಹಾ
ಬೆಳಗಿನಲ್ಲಿ ಓಲಾಡುವ ಶರಣರ ನೆಲೆಯ ಜಗದ ಜಂಗುಳಿಗಳೆತ್ತ ಬಲ್ಲರೊ
ಅಪ್ಪಣ್ಣಪ್ರಿಯ ಚನ್ನಬಸವಣ್ಣಾ?

೮೫. ಜಂಗಮವೇ ಗುರು, ಜಂಗಮವೇ ಲಿಂಗ, ಜಂಡಮವೇ
ಪ್ರಾಣವೆಂದರೆ, ಇಲ್ಲವೆಂಬ ಅಂಗಹೀನರಿರ ನೀವು ಕೇಳಿರೋ. ಜಂಗ
ಮವು ಗುರುವಲ್ಲದಿದ್ದರೆ ಕಾಮ, ಕ್ರೋಧ, ಲೋಭ, ಮೋಹ, ಮದ,
ಮತ್ಸರವ ಹಿಂಗಿಸುವನೆ? ಜಂಗಮ ಪ್ರಾಣವಲ್ಲದಿದ್ದರೆ, ಪ್ರಾಣಕ್ಕೆ ಪ್ರಸಾ
ದವ ಕೊಡುವನೆ? ಜಂಗಮವು ಲಿಂಗವಲ್ಲದಿದ್ದರೆ, ಪ್ರಾಣಲಿಂಗವನೆ
ತೋರುವನೆ? ಇದ ಕಂಡು ಕಾಣೆನೆಂಬ ಭಂಗಿತರ ನುಡಿಯ ಮೆಚ್ಚರು
ನಮ್ಮ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೮೬. ತುಂಬಿದ ಕೆರೆಗೆ ಅಂಬಿಗ ಹರಿಗೋಲಹಾಕಿ, ಬಲಿಯ
ಬೀಸಿದಂತೆ ತುಂಬುತ್ತ ಕೆಡೆವುತ್ತಲಿದ್ದ ಲಿಂಗವ ನೋಡಿ ಕೂಡೆವೆಂದು
ಜಂಗಮದ ನೆಲೆಯ ಕಾಣದೆ ಸಂದು ಹೋದರಲ್ಲ ಈ ಲೋಕವೆಲ್ಲವು
ಲಿಂಗದ ನೆಲೆಯ ಕಾಂಬುದಕ್ಕೆ ಹರಿಗೋಲನೆ ಹರಿದು, ಹುಟ್ಟ ಮುರಿದು,
ಆ ಬಲೆಯೊಳಗೆ ಸಿಕ್ಕಿದ ಖಗ ಮೃಗವನೆ ಕೊಂದು, ಆ ಬಲಿಯನೆ ಕಿತ್ತು,
ಅಂಬಿಗ ಸತ್ತು, ತೊರೆ ಬತ್ತಿ, ಮೆಯ್ಮರೆದಲ್ಲದೆ ಆ ಮಹಾ ಘನವ ಕಾಣ
ಬಾರದೆಂದರು ನಮ್ಮ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೮೭. ಆಗದಾಗದು ಮರ್ತ್ಯದ ಮನುಜರಿಗೆ ಶಿವಸುಖ. ಅದೆಂತೆಂದರೆ ಕಾಳು ವಿಷಯದಲ್ಲಿ ಬಿದ್ದು ನುಡಿವುತ್ತ, ಮರವೆ ನಡೆವುತ್ತ, ಮರವೆ ಮುಟ್ಟುತ್ತ, ಮರವೆ ಕೇಳುತ್ತ, ಮರವೆ ನೋಡುತ್ತ, ಮರವೆ ಇಂತು ಮರಹಿನೊಳಗಿರ್ದು, ಅರುಹ ಕಂಡಿಹೆನೆಂಬ ಅಣ್ಣಗಳಿರಾ, ನೀವು ಕೇಳಿರೋ. ನಮ್ಮ ಶರಣರ ನಡೆ ಎಂತೆಂದರೆ, ಐದು ಗುಣವನೆ ಅಳಿದು, ಐದು ಗುಣವನೆ ಹಿಡಿದು, ನುಡಿವುತ್ತ ಲಿಂಗವಾಗಿ ನುಡಿವರು. ಮುಟ್ಟುತ್ತ ಲಿಂಗವಾಗಿ ಮುಟ್ಟುವರು. ನಡೆವುತ್ತ ಲಿಂಗವಾಗಿ ನಡೆವರು. ಕೇಳುತ್ತ ಲಿಂಗವಾಗಿ ಕೇಳುವರು. ನೋಡುತ್ತ ಲಿಂಗವಾಗಿ ನೋಡುವರು. ಸರ್ವಾಂಗವು ಲಿಂಗವಾಗಿ, ಅಂಗಲಿಂಗವೆಂಬ ಉಭಯವಳಿದು, ಮಂಗಳದ ಮಹಾ ಬೆಳಗಿನಲ್ಲಿ, ಲಿಂಗವೆ ಗೂಡಾಗಿರ್ದ ಕಾರಣ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೮೮. ಕಂಗಳ ಮುಂದೆ ಮಾಣಿಕವಿದ್ದು, ಕಾಣಲರಿಯರಯ್ಯ. ಬಾಗಿಲ ಮುಂದೆ ಹಾಲಸಾಗರವಿದ್ದು, ಒರತೆಯ ನೀರಿಗೆ ಹಾರುವರಂತೆ, ಕಂಗಳ ಮುಂದೆ ಮಹಾಶರಣನಿದ್ದು, ಕತ್ತಲೆ ಎನಲೇಕೆ? ಇನ್ನು ಬೇರೆ ಲಿಂಗವನರಸಿಹೆನೆನಲೇಕೋ ಆ ಮಹಾಶರಣ ನಮ್ಮ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೮೯. ಮನವ ಗೆದ್ದೆವೆಂದು ತನುವ ಕರಗಿಸಿ, ಕಾಯವ ಮರುಗಿಸಿ ನಿದ್ರೆಯ ಕೆಡಿಸಿ, ವಿದ್ಯೆಯ ಕಲಿತೆನೆಂಬ ಬುದ್ಧಿಹೀನರಿರಾ, ನೀವು ಕೇಳಿರೋ. ನಮ್ಮ ಶರಣರು ಮನವನೆಂತು ಗೆದ್ದರೆಂದರೆ, ಕಾಮ, ಕ್ರೋಧವ ನೀಗಿ, ಮೋಹ ಮದ ಮತ್ಸರವ ನಿಶ್ಚೈಸಿ, ಆಕೆ ರೋಷವಳಿದು, ಜಗದ ಪಾಶವ ಬಿಟ್ಟು, ಮರುಗಿಸುವ ಕಾಯವನೆ ಪ್ರಸಾದವ ಮಾಡಿ ಸಲುಹಿದರು. ಕೆಡಿಸುವ ನಿದ್ರೆಯನೆ ಯೋಗಸಮಾಧಿಯ ಮಾಡಿ, ಸುಖವ ನಡಸಿ, ಜಗವ ಗೆದ್ದ ಶರಣರ ಬುದ್ಧಿ ಹೀನರೆತ್ತ ಬಲ್ಲರೋ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ?

೯೦. ಅಯ್ಯ, ನಾ ಮರ್ತ್ಯದಲ್ಲಿ ಹುಟ್ಟಿ, ಕಷ್ಟ ಸಂಸಾರಿ ಎನಿಸಿಕೊಂಡೆ. ಕತ್ತಲೆಯಲ್ಲಿ ಮುಳುಗಿದೆ. ಕರ್ಮಕ್ಕೆ ಗುರಿಯಾಗುತಿದ್ದರೆ, ಹೆತ್ತ ತಾಯಿ ಎಂಬ ಗುರುಸ್ವಾಮಿ ಎನ್ನ ಕೊರಳಿಗೆ ಗಂಡನೆಂಬ ಲಿಂಗವ ಕಟ್ಟಿದನು. ತಂದೆ ಎಂಬ ಜಂಗಮಲಿಂಗವು ಎನ್ನ ಪ್ರಾಣಕ್ಕೆ ಪ್ರಸಾ



ದವ ಊಡಿದನು. ಪ್ರಾಣಕ್ಕೆ ಪ್ರಸಾದವನೂಡಲಾಗಲೆ, ಕತ್ತಲೆ ಹರಿಯಿತ್ತು. ಕರ್ಮ ಹಿಂಗಿತ್ತು. ಮನ ಬತ್ತಲೆಯಾಯಿತ್ತು. ಚಿತ್ತ ಸುಯಿಧಾನವಾಯಿತ್ತು, ನಿಶ್ಚಿಂತವಾಯಿತ್ತು. ನಿಜವ ನೆಮ್ಮಿ ನೋಡುವನ್ನಕ್ಕ, ಎನ್ನ ಅತ್ತೆ ಮಾವನು ಅರತು ಹೋದರು. ಅತ್ತಿಗೆ ನಾದಿನಿಯರು ಎತ್ತ ಲೋಡಿ ಹೋದರು. ಸುತ್ತಲಿರುವ ಬಂಧುಗಳೆಲ್ಲ ಬಯಲಾದರು. ಎನ್ನ ತಂದೆ ತಾಯಿ ಕಟ್ಟಿದ ಚಿಕ್ಕಂದಿನ ಗಂಡನ ದಿಟ್ಟಿಸಿ, ನೋಡುವ ನೋಟ ಹೋಗಿ, ಎನ್ನ ಮನಕ್ಕೆ ಸಿಲ್ಕಿತ್ತು. ಅಂಗಲಿಂಗವೆಂಬ ಉಭಯವಳಿಯಿತ್ತು. ಸಂಗಸುಖ ಹಿಂಗಿತ್ತು. ಮಂಗಳದ ಮಹಾಬೆಳಗಿನಲ್ಲಿ ಓಲಾಡಿ ಸುಖಿಯಾದೆನಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೯೧. ಅಯ್ಯ, ಕಿಚ್ಚಿನೊಳಗೆಬೆಂದ ಕಾಯಕ್ಕೆ ಅಚ್ಚುಗ ಉಂಟೆ? ತಾನುತಾನಾದ ಬಳಿಕ ನೂವರ ಹಂಗುಂಟೆ? ಮನವು ಮಹದಲ್ಲಿ ನಿಂದ ಬಳಿಕ ಮರವೆಯುಂಟೇ? ತನುವ ಮರೆದಂಗೆ, ಇನ್ನಿದಿರೆಂಬುದುಂಟೆ? ಬೆಳಗ ಕಂಡವಂಗೆ ಕತ್ತಲೆಯ ಹಂಗುಂಟೆ? ಇವೆಲ್ಲವನು ಹಿಂಗಿಸಿ, ಈ ಮಹದಲ್ಲಿ ಬೆರೆದ ಶರಣಂಗೆ ನಮೋ ನಮೋ ಎಂದು ಸುಖಿಯಾದೆನಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೯೨. ಮಹಾಬೆಳಗನೆ ನೋಡಿ, ಮನವ ನಿಮ್ಮ ವಶವ ಮಾಡಿ, ತನುವ ಮರೆದು, ಧನವ ಜಂಗಮಕ್ಕಿತ್ತು, ತಾನು ಬಯಲ ದೇಹಿಯಾದಲ್ಲದೆ ನಿಜಮುಕ್ತಿ ಇಲ್ಲವೆಂದರು ನಮ್ಮ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೯೩. ಮನವೆಂದರೆ ಮರವೆಗೆ ಒಳಗು ಮಾಡಿತ್ತು. ತನುವೆಂದರೆ ತಾಮಸಕ್ಕೊಳಗು ಮಾಡಿತ್ತು. ಧನವೆಂದರೆ ಆಸೆ ಎಂಬ ಪಾಶಕ್ಕೊಳಗು ಮಾಡಿತ್ತು. ಇವು ಮಾಯಾ ಪಾಶವೆಂದು ಬಿಟ್ಟು ಹುಟ್ಟನರಿದು, ಬಟ್ಟ ಬಯಲಲ್ಲಿ ನಿಂದು, ಚಿತ್ತ ನಿರ್ಮಳವಾಗಿ ನೋಡಿ ಕಂಡ ಶರಣಗೆ ತನುವೆ ಲಿಂಗವಾಯಿತ್ತು. ಮನವೆ ಘನವಾಯಿತ್ತು. ಆ ಧನವೆ ಜಂಗಮವಾಯಿತ್ತು. ಈ ತ್ರಿವಿಧವನು ತ್ರಿವಿಧಕಿತ್ತು, ತಾ ಬಯಲ ದೇಹಿಯಾದನಯ್ಯ, ಆ ಮಹಾ ಶಿವಶರಣನು. ಇದರ ನೆಲೆಯನರಿಯದೆ, ಈ ಮನದ ಬೆಂಬಳಿಗೊಂಡಾಡಿದವರೆಲ್ಲ ನರಗುರಿಗಳಾದರಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೯೪. ಹೊತ್ತು ಹೊತ್ತಿಗೆ ಕಿಚ್ಚನೆ ಬರಿಸಿದರೆ, ಕಲೆ ಉರಿದುದೆಂದು, ಹೊತ್ತು ಹೊತ್ತಿಗೆ ಪ್ರಾಣಕ್ಕೆ ಪ್ರಸಾದವ ಸ್ಥಾಪ್ಯವ ಮಾಡಿ, ತನುವ ಖಂಡಿಸದೆ, ಕಾಯುವ ಮರಗಿಸದೆ, ಭಾವವನೆ ಬಯಲು ಮಾಡಿ, ಭವಕೆ ಸವೆದು, ಕಾಣದಪ್ಪತವನೆ ಕಂಡು, ಮಹಾಬೆಳಗಿನಲಿ ಬಯಲಾದರು ಕಾಣಾ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೯೫. ಅದೇನು ಕಾರಣವೆಂದರೆ ಘನಕ್ಕೆ ಘನವಾದರು. ಮನಕ್ಕೆ ಮನವಾದರು. ತನುವಿಂಗೆ ತನುವಾದರು. ನಡೆನುಡಿಗೆ ಚೈತನ್ಯವಾದರು. ನೋಡುವುದಕ್ಕೆ ನೋಟವಾದರು. ಕೂಡುವದಕ್ಕೆ ಲಿಂಗವಾದರು. ಈ ಒಳಹೊರಗೆ ಬೆಳಗುವ ಬೆಳಗು ನೀವೆಯಾದ ಕಾರಣ ನಿಮ್ಮ ಪಾದದಲ್ಲಿ ನಾ ನಿಜಮುಕ್ತಳಾದೆನಯ್ಯ ಚನ್ನಮಲ್ಲೇಶ್ವರ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೯೬. ಕಾಯುವೆಂಬ ಕದಳಿಯ ಹೊಕ್ಕು, ಜೀವ ಪರಮರ ನೆಲೆಯನರಿದು, ರಸ, ರುಧಿರ, ಮಾಂಸ, ಮಜ್ಜೆ, ಮಿದುಳು, ಅಸ್ಥಿ, ಶುಕ್ಲ ಈ ಸಪ್ತ ಧಾತುಗಳ ಸಂಚವ ತಿಳಿದು, ಮತ್ತೆ ಮನ ಪವನ ಬಿಂದುವನೊಡಗೂಡಿ ಉತ್ತರಕ್ಕೇರಿ ನೋಡಲು, ಬಟ್ಟಬಯಲಾಗಿದ್ದಿತ್ತು. ಆ ಬಯಲಲ್ಲಿಯೆ ನಿಂದು, ನಿರಾಳದೊಳಗೂಡಿ, ಮಹಾಬೆಳಗನೆ ಕೂಡಿ ನಾ ನಿಜ ಮುಕ್ತಳಾದೆನಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೯೭. ಅಂಗವ ಮರೆದಂಗೆ ಲಿಂಗದ ಹಂಗೇಕೊ? ಅರಿವ ಕಂಡವಂಗೆ ಕುರುಹಿನ ಹಂಗೇಕೊ? ತಾನು ತಾನಾದವಂಗೆ ಧ್ಯಾನದ ಹಂಗೇಕೊ? ಮನಮುಗ್ಧವಾದವಂಗೆ ಮಾನವರ ಹಂಗೇಕೊ? ಆಸೆಯನಳಿದವಂಗೆ ರೋಷದ ಹಂಗೇಕೊ? ಕಾಮನ ಸುಟ್ಟವಂಗೆ ಕಳವಳದ ಹಂಗೇಕೊ? ನಡೆಗೆಟ್ಟವಂಗೆ ನುಡಿಯ ಹಂಗೇಕೊ? ತನ್ನ ಮರೆದು ನಿಮ್ಮನರಿದ ಶರಣಂಗೆ ಅಲ್ಲೆ ಐಕ್ಯ ಕಂಡೆ ಅಪ್ಪಣ್ಣಪ್ರಿಯ ಚನ್ನಬಸವಣ್ಣ.

೯೮. ನೋಡಿಹೆನೆಂದರೆ ನೋಟವಿಲ್ಲ. ಕೇಳಿಹೆನೆಂದರೆ ಕಿವಿ ಇಲ್ಲ. ವಾಸಿಸಿಹೆನೆಂದರೆ ನಾಸಿಕವಿಲ್ಲ. ನುಡಿದಿಹೆನೆಂದರೆ ಬಾಯಿಲ್ಲ. ಹಿಡಿದಿಹೆನೆಂದರೆ ಹಸ್ತವಿಲ್ಲ. ನಡೆದಿಹೆನೆಂದರೆ ಕಾಲಿಲ್ಲ. ನೆನೆದಿಹೆನೆಂದರೆ ಮನವಿಲ್ಲ. ಇಂತು ನೆನಹು ನಿಷ್ಪತ್ತಿಯಾಗಿ, ಶರಣರ ಪಾದದಲ್ಲಿಯೆ ಬೆರೆದು ಸುಖಿಯಾದೆನಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣ.



೯೯. ಮನ ಮಂಕಾಯಿತ್ತು. ತನುವು ಮರೆಯಿತ್ತು. ವಾಯು ಬರತಿತ್ತು. ಉರಿ ಎದ್ದಿತ್ತು. ಹೊಗೆ ಹರಿಯಿತ್ತು. ಸರೋವರವೆಲ್ಲ ಉರಿದು ಹೋಯಿತ್ತು. ಒಳಗೆ ಹೊಕ್ಕು ಕದವ ತೆಗೆದು ಬಯಲ ನೋಡಿ, ಬೆಳಗ ಕೂಡಿದಲ್ಲದೆ ನಿಜ ಮುಕ್ತಿ ಇಲ್ಲವೆಂದರು ನಮ್ಮ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೧೦೦. ಬೆಟ್ಟ ಬೆಂದಿತ್ತು. ಬಿದಿರುಗಣ್ಣು ಒಡೆಯಿತ್ತು. ಸುತ್ತನೋಡಿದರೆ ನಿರಾಳವಾಯಿತ್ತು. ಕತ್ತಲೆ ಹರಿಯಿತ್ತು. ಮನ ಬತ್ತಲೆಯಾಯಿತ್ತು. ಚಿತ್ತ ಮನ ಬುದ್ಧಿ ಏಕವಾದವು. ಎಚ್ಚತ್ತು ನೋಡಿದರೆ, ಬಚ್ಚಬರಿಯ ಬೆಳಗಲ್ಲದೆ, ಕತ್ತಲೆಯ ಕಾಣಬಾರದು ಕಾಣಾ ಅಪ್ಪಣ್ಣಪ್ರಿಯ ಚನ್ನಬಸವಣ್ಣಾ.

೧೦೧. ತನು ಕರಗಿತ್ತು. ಮನ ನಿಂದಿತ್ತು. ಉಲುಹು ಅಡಗಿತ್ತು. ನೆಲೆಗೆ ನಿಂದಿತ್ತು. ಮನ ಪವನ ಬಿಂದು ಒಡಗೂಡಿತ್ತು. ಉರಿ ಎದ್ದಿತ್ತು. ಊರ್ಧ್ವಕ್ಕೆ ಕೊಂಡಿತ್ತು. ಶರಧಿ ಬತ್ತಿತ್ತು. ನೊರೆ ತೆರೆ ಅಡಗಿತ್ತು. ಅಷ್ಟಮದವೆಲ್ಲ ಹಿಟ್ಟುಗುಟ್ಟಿತ್ತು. ಕರಣಂಗಳೆಲ್ಲ ಉರಿದು ಹೋಯಿತ್ತು. ಸಪ್ತಧಾತು ಕೆಟ್ಟಿತ್ತು. ರಸವರತಿತ್ತು. ಅಪ್ಪು ಬರತಿತ್ತು. ಕಟ್ಟೆ ಹಾಯ್ದು ಬಿಂದಿನಂತೆ ತೊಟ್ಟು ಬಿಟ್ಟು, ಬಟ್ಟಬಯಲೊಳಗೆ ಬಿದ್ದು, ನಾನೆತ್ತ ಹೋದೆನೆಂದರಿಯೆನಯ್ಯ ಅಪ್ಪಣ್ಣಪ್ರಿಯ ಚನ್ನಬಸವಣ್ಣ.

ಅರಿವೇ ಗುರು
ಕ್ರಮಾಂಕ
ಶಿವಬಸವ ನಗರ
570

820
570